ವಿಜಯಪುರ | ಸಂಪುಟ 04 | ಸಂಚಿಕೆ 161 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಆಗಸ್ಟ್, 18, 2026

"ರಾಜ್ಯಾದ್ಯಂತ ಆಹಾರ ಸುರಕ್ಷತಾ ಕ್ರಮಗಳನ್ನು ತೀವ್ರಗೊಳಿಸಲಾಗಿದ್ದು, 1,849 ಹೋಟೆಲ್ ಹಾಗೂ ರೆಸ್ಟೋರೆಂಟ್ ಗಳಲ್ಲಿ ತಪಾಸಣೆ ನಡೆಸಲಾಗಿದೆ ಮತ್ತು 2,400ಕ್ಕೂ ಹೆಚ್ಚು ಆಹಾರ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯದ ಪರೀಕ್ಷೆಗೆ ಕಳುಹಿಸಲಾಗಿದೆ."



■ ಯು.ಟಿ. ಖಾದರ್ ಆರೋಗ್ಯ ಸಚಿವರು

# ಸಚಿವ ನಾಗೇಂದ್ರ ರಾಜೀನಾಮೆಗೆ ವಿಪಕ್ಷಗಳ ಬಿಗಿ ಪಟ್ಟು!

## ವಿಧಾನಸಭೆಯಲ್ಲಿ ತೀವ್ರ ಕೋಲಾಹಲ | ಬಿಜೆಪಿ ಮತ್ತು ಜೆಡಿಎಸ್ ತೀವ್ರ ಆಗ್ರಹ | ಬಿಜೆಪಿ ನಾಯಕರ ಪ್ರತಿಭಟನೆ

ಬೆಂಗಳೂರು: ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಕೋಟ್ಯಂತರ ರೂಪಾಯಿ ದುರುಪಯೋಗದ ಆರೋಪ ಎದುರಿಸುತ್ತಿರುವ ಸಚಿವ ಬಿ. ನಾಗೇಂದ್ರ ಅವರನ್ನು ತಕ್ಷಣವೇ ಸಂಪುಟದಿಂದ ವಜಾಗೊಳಿಸಬೇಕೆಂದು ಒತ್ತಾಯಿಸಿ ಪ್ರತಿಪಕ್ಷಗಳು ಸೋಮವಾರ ವಿಧಾನಸಭೆಯಲ್ಲಿ ಪ್ರತಿಭಟನೆ ನಡೆಸಿದವು.

ವಿಧಾನಸಭೆಯಲ್ಲಿ ಪ್ರಶ್ನೋತ್ತರ ಅವಧಿ ಆರಂಭವಾಗುತ್ತಿದ್ದಂತೆ ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಈ ವಿಷಯವನ್ನು ಪ್ರಸ್ತಾಪಿಸಿದವು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮತ್ತು ಬಿಜೆಪಿ ಶಾಸಕ ಸುನಿಲ್ ಕುಮಾರ್ ಈ ವಿಷಯವನ್ನು ಪ್ರಸ್ತಾಪಿಸಿ, "ಭ್ರಷ್ಟ ಸಚಿವ" ರೊಂದಿಗೆ ಪ್ರಶ್ನೋತ್ತರ ಅವಧಿಯಲ್ಲಿ ಹೇಗೆ ಭಾಗವಹಿಸಬೇಕು ಎಂದು ಪ್ರಶ್ನಿಸಿದರು.

ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಇಲ್ಲವೇ ಅವರನ್ನು ಸಂಪುಟದಿಂದ ವಜಾಗೊಳಿಸಬೇಕೆಂದು ಒತ್ತಾಯಿಸಿದ ಅಶೋಕ್, "ಅವರನ್ನು ವಜಾಗೊಳಿಸದ ಹೊರತು ನಾವು ಸದನ ನಡೆಸಲು ಬಿಡುವುದಿಲ್ಲ. ಮುಖ್ಯಮಂತ್ರಿಗಳು ಅವರನ್ನು ತಕ್ಷಣವೇ ಸಂಪುಟದಿಂದ ವಜಾಗೊಳಿಸಬೇಕು" ಎಂದು ಆಗ್ರಹಿಸಿದರು.



"ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾಗ, ನಾಗೇಂದ್ರ ಅವರಿಂದ ರಾಜೀನಾಮೆ ಪಡೆಯಲಾಗಿತ್ತು. ಈಗ ಅವರನ್ನು ಮತ್ತೆ ಏಕೆ ಸಂಪುಟಕ್ಕೆ ಸೇರಿಸಿಕೊಳ್ಳಲಾಗಿದೆ" ಎಂದು ಅಶೋಕ ಪ್ರಶ್ನಿಸಿದರು.

ಪ್ರಶ್ನೋತ್ತರ ಅವಧಿಗೆ ಅವಕಾಶ ನೀಡುವಂತೆ ಸ್ಪೀಕರ್ ಜಿ.ಎಸ್. ಪಾಟೀಲ್ ಅವರು ಪದೇ ಪದೇ ವಿನಂತಿಸಿದರೂ ಬಿಜೆಪಿ ಪ್ರತಿಭಟನೆ ನಡೆಸಿ, ಘೋಷಣೆಗಳನ್ನು ಕೂಗುತ್ತಿದ್ದರಿಂದ ಸದನವನ್ನು ಸ್ವಲ್ಪ ಸಮಯದವರೆಗೆ ಮುಂದೂಡಿದರು.

ಸದ್ಯ ಯೋಜನೆ ಮತ್ತು ಅಂಕಿಅಂಶ ಸಚಿವರಾಗಿರುವ ನಾಗೇಂದ್ರ ಅವರನ್ನು ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದಲ್ಲಿ ಜುಲೈ 2024 ರಲ್ಲಿ ಇಡಿ ಬಂಧಿಸಿತ್ತು ಮತ್ತು ಅದೇ ವರ್ಷ ಅಕ್ಟೋಬರ್‌ನಲ್ಲಿ ಬೆಂಗಳೂರಿನ ವಿಶೇಷ ನ್ಯಾಯಾಲಯವು ಬಳ್ಳಾರಿಯ ಶಾಸಕರಿಗೆ ಜಾಮೀನು ನೀಡಿತ್ತು.

ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ಮತ್ತು ಸಿಬಿಐ ಆರೋಪಪಟ್ಟಿಯಲ್ಲಿ ನಾಗೇಂದ್ರ ಅವರನ್ನು ಹೆಸರಿಸಿದೆ.

ಒಟ್ಟಿನಲ್ಲಿ, ನಾಗೇಂದ್ರ ರಾಜೀನಾಮೆ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿ–ಜೆಡಿಎಸ್ ಮತ್ತು ಕಾಂಗ್ರೆಸ್ ನಡುವೆ ವಾಕ್ಸಮರ ತೀವ್ರಗೊಂಡಿದ್ದು, ಮುಂದಿನ ದಿನಗಳಲ್ಲೂ ಈ ವಿಚಾರ ಅಧಿವೇಶನದಲ್ಲಿ ಮತ್ತಷ್ಟು ಕಾವು ಪಡೆಯುವ ಸಾಧ್ಯತೆ ಇದೆ.

### ದೇಶದಲ್ಲಿ ಯಾರ ಮೇಲೆ ಕೇಸ್‌ಗಳಿಲ್ಲ? :ಸಿಎಂ

ಬೆಂಗಳೂರು: ದೇಶದಲ್ಲಿ ಯಾರ ಮೇಲೆ ಕೇಸ್‌ಗಳಿಲ್ಲ ಎಂದು ಪ್ರಶ್ನಿಸುವ ಮೂಲಕ ಬಿ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿದ ವಿಪಕ್ಷಗಳಿಗೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿರುಗೇಟು ನೀಡಿದ್ದಾರೆ.



ಹೆಚ್.ಡಿ. ಕುಮಾರಸ್ವಾಮಿ ಜಾಮೀನು ಪಡೆದುಕೊಂಡಿಲ್ಲವೇ? ದೇಶದಲ್ಲಿ ಎಷ್ಟು ಜನ ಸಚಿವರಾದವರು ಜಾಮೀನು ಮೇಲೆ ಇಲ್ಲ ಎಂದು ಪ್ರಶ್ನಿಸಿದರು. ನಾಗೇಂದ್ರ ಅವರು ಕರ್ನಾಟಕದಿಂದ ಹೊರಗೆ ಹೋಗಿರುವ ವಿಚಾರ ನನ್ನ ಗಮನಕ್ಕೆ ಬಂದಿಲ್ಲ. ಯಾವುದೇ ನಿಯಮ ಉಲ್ಲಂಘನೆಯಾಗಿದೆ ಎಂದು ನ್ಯಾಯಾಲಯ ಯಾವುದೇ ಆದೇಶ ನೀಡಿಲ್ಲ. ಕಾನೂನಿನ ಚೌಕಟ್ಟಿನಲ್ಲಿ ಏನೇ ಇದ್ದರೂ ಅದನ್ನು ಪರಿಶೀಲಿಸುತ್ತೇವೆ. ವಿಪಕ್ಷಗಳಿಗೆ ಚರ್ಚಿಸಲು ವಿಷಯಗಳು ಬೇಕು, ಹಾಗಾಗಿ ಮಾತನಾಡುತ್ತಿದ್ದಾರೆ, ಮಾತನಾಡಲಿ ಬಿಡಿ ಎಂದು ಸಿಎಂ ತಿರುಗೇಟು ನೀಡಿದರು.

## ವಿಧಾನ ಪರಿಷತ್ ಉಪಸಭಾಪತಿ ಹುದ್ದೆಗೆ ನಾಮಪತ್ರ ಸಲ್ಲಿಸಿದ ಎಂಎಲ್‌ಸಿ ಉಮಾಶ್ರೀ!

ಬೆಂಗಳೂರು: ಕರ್ನಾಟಕ ವಿಧಾನ ಪರಿಷತ್ತಿನ ಉಪಸಭಾಪತಿ ಹುದ್ದೆಗೆ ಕಾಂಗ್ರೆಸ್ ಎಂಎಲ್‌ಸಿ ಉಮಾಶ್ರೀ ಸೋಮವಾರ ನಾಮಪತ್ರ ಸಲ್ಲಿಸಿದ್ದಾರೆ. ಮಂಗಳವಾರ ಹೊಸ ಉಪಸಭಾಪತಿಯ ಆಯ್ಕೆ ನಡೆಯಲಿದೆ.

ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸಚಿವ ಮತ್ತು ವಿಧಾನ ಪರಿಷತ್ ಸಭಾ ನಾಯಕ ಯತೀಂದ್ರ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಉಮಾಶ್ರೀ ಪರಿಷತ್ತಿನ ಕಾರ್ಯದರ್ಶಿ ಜ್ಯೋತಿ ಅವರಿಗೆ ತಮ್ಮ ನಾಮಪತ್ರ ಸಲ್ಲಿಸಿದರು.

2021ರ ಚುನಾವಣೆಯಲ್ಲಿ ಚಿಕ್ಕಮಗಳೂರು ಕ್ಷೇತ್ರದಿಂದ ಆಯ್ಕೆಯಾಗಿದ್ದ ಬಿಜೆಪಿಯ ಕೆ ಪ್ರಾಣೇಶ್ ಅವರ ಆಯ್ಕೆಯನ್ನು ಕರ್ನಾಟಕ ಹೈಕೋರ್ಟ್ ಅಸಿಂಧುಗೊಳಿಸಿದ ಹಿನ್ನೆಲೆಯಲ್ಲಿ, ಅವರು ಉಪಸಭಾಪತಿ ಹುದ್ದೆ ಹಾಗೂ ವಿಧಾನ ಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದರಿಂದ ಈ ಹುದ್ದೆ ತೆರವಾಗಿತ್ತು. 2013ರಲ್ಲಿ ಉಮಾಶ್ರೀ ಅವರು ತೇರದಾಳ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಶಾಸಕಿಯಾಗಿ ಆಯ್ಕೆಯಾಗಿದ್ದರು. ಹಿರಿಯ ನಾಗರಿಕರ ಸಬಲೀಕರಣ, ಹಾಗೂ ಕನ್ನಡ ಭಾಷೆ ಮತ್ತು ಸಂಸ್ಕೃತಿ ಇಲಾಖೆಯ ಸಚಿವೆಯಾಗಿ ಸೇವೆ ಸಲ್ಲಿಸಿದರು.

## ಎ.ಬಿ.ವಿ ಶಾಲೆಯಲ್ಲಿ ನಾಗಪಂಚಮಿ ಸಂಪ್ರದಾಯಬದ್ಧ ಆಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಎ.ಬಿ.ವಿ. (ಸಿ.ಬಿ.ಎಸ್.ಇ.) ಶಾಲೆಯಲ್ಲಿ ನಾಗರ ಪಂಚಮಿ ಹಬ್ಬವನ್ನು ಸಾಂಪ್ರದಾಯಿಕ ಹಾಗೂ ಭಕ್ತಿಭಾವದಿಂದ ಆಚರಿಸಲಾಯಿತು. ಶಿಕ್ಷಣದ ಜೊತೆಗೆ ಭಾರತೀಯ ಸಂಸ್ಕೃತಿ, ಪರಂಪರೆ ಹಾಗೂ ಆಚರಣೆಗಳ ಮಹತ್ವವನ್ನು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗೆ ಪರಿಚಯಿಸುವ ಉದ್ದೇಶದಿಂದ ಶಾಲೆಯಲ್ಲಿ ವಿವಿಧ ಸಾಂಪ್ರದಾಯಿಕ ಕಾರ್ಯಕ್ರಮಗಳೊಂದಿಗೆ ನಾಗರ ಪಂಚಮಿ ಆಚರಣೆ ನೆರವೇರಿಸಲಾಯಿತು.

ಶಾಲೆಯ ಪ್ರಾಂಶುಪಾಲೆ ಐಶ್ವರ್ಯ ಸಂಗಮ, ಉಪಪ್ರಾಂಶುಪಾಲ ರವಿಕಾಂತ ಮೆಂಡೇಗಾರ ನಾಗರ ಪಂಚಮಿ ಹಬ್ಬದ ಮಹತ್ವವನ್ನು ತಿಳಿಸಿದರು.




## ನಾಗರ ಪಂಚಮಿ ವೇಳೆ ನಾಗರಾಜನ ದರ್ಶನ : ಭಕ್ತರಲ್ಲಿ ಹರ್ಷ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಇಟ್ಟಂಗಿಹಾಳ ರಸ್ತೆಯ ವೈಭವ ನಗರ (ಫೇಜ್ 2) ಕೆ.ಎಚ್.ಬಿ. ಕಾಲನಿಗೆ ಮೂಲ ಸೌಕರ್ಯಗಳನ್ನು ಒದಗಿಸಲು ಆಗ್ರಹಿಸಿ ಅಲ್ಲಿನ ನಿವಾಸಿಗಳು ಸೋಮವಾರ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ್ ಮೆಕ್ಕಳಕಿ ಅವರನ್ನು ಕಂಡು ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಬಡಾವಣೆ ನಿವಾಸಿಗಳು, ವೈಭವ ನಗರ (ಫೇಜ್ 2)ದಲ್ಲಿ ಬೀದಿ ದೀಪಗಳಲ್ಲದೆ ಅಲ್ಲಲ್ಲಿ ಹೈಮಾಸ್ಕ್ ದೀಪಗಳನ್ನು ಅಳವಡಿಸಬೇಕು. ನಗರ ಸಾರಿಗೆ ಬಸ್ ನಿಲ್ದಾಣ ಮತ್ತು ಮಕ್ಕಳಿಗೆ ಆಟದ ಮೈದಾನ ನಿರ್ಮಿಸಬೇಕು. ವಿದ್ಯುತ್ ಪರಿವರ್ತಕಗಳನ್ನು ಚಾರ್ಜ್ ಮಾಡಿಸುವುದು ಸೇರಿದಂತೆ ಮೂಲ ಸೌಕರ್ಯಗಳನ್ನು ಒದಗಿಸಿಕೊಡುವಂತೆ ಒತ್ತಾಯಿಸಿದರು.



ಈ ವೇಳೆ ಉದ್ಯಮಿ ಚಂದ್ರಕಾಂತ ಮ ಬಿರಾದಾರ, ಲವ ಎಂ ಚವಾಣ್, ಅರವಿಂದ ಲಂಬು, ಬಸವರಾಜ ಶಾರದಳ್ಳಿ, ಶ್ರೀಮಂತ ಪತ್ತಾರ, ಎಂ ಬಿ ಹತ್ತಿ, ಅಶೋಕ ಮಂಗಸೂಳಿ ಸೇರಿದಂತೆ ಇನ್ನಿತರರಿದ್ದರು.

## ವೈಭವ ನಗರಕ್ಕೆ ಮೂಲ ಸೌಕರ್ಯ ಒದಗಿಸಲು ಆಗ್ರಹಿಸಿ ಮನವಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಇಟ್ಟಂಗಿಹಾಳ ರಸ್ತೆಯ ವೈಭವ ನಗರ (ಫೇಜ್ 2) ಕೆ.ಎಚ್.ಬಿ. ಕಾಲನಿಗೆ ಮೂಲ ಸೌಕರ್ಯಗಳನ್ನು ಒದಗಿಸಲು ಆಗ್ರಹಿಸಿ ಅಲ್ಲಿನ ನಿವಾಸಿಗಳು ಸೋಮವಾರ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ್ ಮೆಕ್ಕಳಕಿ ಅವರನ್ನು ಕಂಡು ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಬಡಾವಣೆ ನಿವಾಸಿಗಳು, ವೈಭವ ನಗರ (ಫೇಜ್ 2)ದಲ್ಲಿ ಬೀದಿ ದೀಪಗಳಲ್ಲದೆ ಅಲ್ಲಲ್ಲಿ ಹೈಮಾಸ್ಕ್ ದೀಪಗಳನ್ನು ಅಳವಡಿಸಬೇಕು. ನಗರ ಸಾರಿಗೆ ಬಸ್ ನಿಲ್ದಾಣ ಮತ್ತು ಮಕ್ಕಳಿಗೆ ಆಟದ ಮೈದಾನ ನಿರ್ಮಿಸಬೇಕು. ವಿದ್ಯುತ್ ಪರಿವರ್ತಕಗಳನ್ನು ಚಾರ್ಜ್ ಮಾಡಿಸುವುದು ಸೇರಿದಂತೆ ಮೂಲ ಸೌಕರ್ಯಗಳನ್ನು ಒದಗಿಸಿಕೊಡುವಂತೆ ಒತ್ತಾಯಿಸಿದರು.

ಈ ವೇಳೆ ಉದ್ಯಮಿ ಚಂದ್ರಕಾಂತ ಮ ಬಿರಾದಾರ, ಲವ ಎಂ ಚವಾಣ್, ಅರವಿಂದ ಲಂಬು, ಬಸವರಾಜ ಶಾರದಳ್ಳಿ, ಶ್ರೀಮಂತ ಪತ್ತಾರ, ಎಂ ಬಿ ಹತ್ತಿ, ಅಶೋಕ ಮಂಗಸೂಳಿ ಸೇರಿದಂತೆ ಇನ್ನಿತರರಿದ್ದರು.

## ನಾಗರ ಪಂಚಮಿ: ಮಹಿಳೆಯರಿಂದ ನಾಗದೇವತೆಗೆ ಪೂಜೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಶ್ರಾವಣ ಮಾಸದಲ್ಲಿ ಬರುವ ಪ್ರಮುಖ ಹಬ್ಬಗಳಲ್ಲಿ ನಾಗರ ಪಂಚಮಿ ವಿಶೇಷ ಸ್ಥಾನ ಪಡೆದಿದ್ದು, ಜಿಲ್ಲಾದ್ಯಂತ ಸೋಮವಾರ ನಾಗದೇವತೆಗೆ ಭಕ್ತಿಭಾವದಿಂದ ಪೂಜೆ ಸಲ್ಲಿಸುವ ಮೂಲಕ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು.

ನಾಗರ ಪಂಚಮಿ ಹಬ್ಬವು ಪ್ರಕೃತಿ, ನಾಗಾರಾಧನೆ ಹಾಗೂ ಕುಟುಂಬ ಬಾಂಧವ್ಯದ ಸಂಕೇತವಾಗಿದೆ. ವಿಶೇಷವಾಗಿ ಮಹಿಳೆಯರು ಕುಟುಂಬದ ಸದಸ್ಯರ, ಸಹೋದರರ ಆರೋಗ್ಯ, ಆಯುಷ್ಯ, ಸುಖ ಸಮೃದ್ಧಿ ಹಾಗೂ ಯಶಸ್ಸಿಗಾಗಿ ನಾಗದೇವತೆಯನ್ನು ಪೂಜಿಸಿ ಪ್ರಾರ್ಥಿಸಿದರು.

ಮಕ್ಕಳು ಹಾಗೂ ಮಹಿಳೆಯರು ಹೊಸ ಬಟ್ಟೆ ಧರಿಸಿ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡರು.

ಪಟ್ಟಣ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಬೆಳಗ್ಗೆಯಿಂದಲೇ ನಾಗದೇವರ ದೇವಸ್ಥಾನ ಹಾಗೂ ಕಲ್ಲಿನಿಂದ ಕೆತ್ತಿದ ನಾಗದೇವರ ಮೂರ್ತಿಗಳ ಬಳಿ ಮಹಿಳೆಯರು ಸಾಲುಗಟ್ಟಿ ಪೂಜೆ ಸಲ್ಲಿಸಿದರು.



ನಾಗದೇವತೆಗೆ ಹಾಲು, ತುಪ್ಪ, ಅರಿಶಿಣ, ಕುಂಕುಮ, ಹೂವು, ಹಣ್ಣು ಹಾಗೂ ವಿವಿಧ ಬಗೆಯ ನೈವೇದ್ಯ ಅರ್ಪಿಸಿ ಭಕ್ತಿಯಿಂದ ಪ್ರಾರ್ಥಿಸಿದರು. ಕಡುಬು ಸೇರಿದಂತೆ ಹಬ್ಬದ ವಿಶೇಷ ಖಾದ್ಯಗಳನ್ನು ನೈವೇದ್ಯವಾಗಿ ಅರ್ಪಿಸಲಾಯಿತು.

ಗ್ರಾಮೀಣ ಭಾಗದಲ್ಲಿ ನಾಗರ ಪಂಚಮಿ ಹಬ್ಬಕ್ಕೆ ವಿಶೇಷ ಸಾಂಪ್ರದಾಯಿಕ ಮೆರುಗು ಕಂಡುಬಂತು. ಮನೆಗಳಲ್ಲಿಯೂ ಹಿಟ್ಟಿನಿಂದ ನಾಗದೇವರ ಆಕೃತಿ ತಯಾರಿಸಿ, ಅದಕ್ಕೆ ಹಾಲೆರೆದು ಪೂಜೆ ಸಲ್ಲಿಸುವ ಪದ್ಧತಿ ನಡೆಯಿತು. ಬಂಧು ಬಳಗ ಹಾಗೂ ನೆರೆಹೊರೆಯವರನ್ನು ಮನೆಗೆ ಆಹ್ವಾನಿಸಿ ಹಬ್ಬದ ವಿವಿಧ ಖಾದ್ಯಗಳನ್ನು ಹಂಚಿಕೊಂಡು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು.

### ಮಹಿಳೆಯರ ಜೋಕಾಲಿ ಸಂಭ್ರಮ

ನಾಗರ ಪಂಚಮಿಯ ಮತ್ತೊಂದು ವಿಶೇಷವೆಂದರೆ ಮಹಿಳೆಯರ ಸಂಭ್ರಮ. ಗ್ರಾಮಗಳಲ್ಲಿ ಜೋಕಾಲಿ ಹಾಕಿ ಆಡುವುದು, ಹಬ್ಬದ ಹಾಡುಗಳನ್ನು ಹಾಡುವುದು ಹಾಗೂ ವಿವಿಧ ಸಾಂಪ್ರದಾಯಿಕ ಆಟ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವುದು ಕಂಡುಬಂತು. ಯುವಕರು ವಿವಿಧ ಕ್ರೀಡಾ ಹಾಗೂ ಮನರಂಜನಾ ಸ್ಪರ್ಧೆಗಳಲ್ಲಿ ಭಾಗವಹಿಸಿ ಹಬ್ಬಕ್ಕೆ ಮತ್ತಷ್ಟು ಮೆರುಗು ತಂದರು.

## ಕಾಖಂಡಕಿ & ಸುತ್ತಲಿನ ತಾಣಗಳ ಕುರಿತು ಸಂಶೋಧನೆ ಅಗತ್ಯ

### ಕಾಖಂಡಕಿಯಲ್ಲಿ ಶ್ರೀ ಹಣಮಂತ ದೇವರ ನೂತನ ದೇವಸ್ಥಾನದ ಕಟ್ಟಡ ನಿರ್ಮಾಣದ ಭೂಮಿ ಪೂಜೆ ನೆರವೇರಿಸಿದ ಸಚಿವ ಎಂ.ಬಿ.ಪಾಟೀಲ ಅಭಿಮತ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕಾಖಂಡಕಿ ಮತ್ತು ಸುತ್ತಮುತ್ತಲಿನ ತಾಣಗಳು ಐತಿಹಾಸಿಕ ಹಿನ್ನೆಲೆಯ ಪುಣ್ಯಭೂಮಿಗಳಾಗಿದ್ದು, ಈ ಕುರಿತು ಹೆಚ್ಚಿನ ಸಂಶೋಧನೆ ನಡೆಸುವುದು ಅಗತ್ಯವಾಗಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ರವಿವಾರ ಬಬಲೇಶ್ವರ ತಾಲೂಕಿನ ಕಾಖಂಡಕಿಯಲ್ಲಿ ಶ್ರೀ ಹಣಮಂತ ದೇವರ ನೂತನ ದೇವಸ್ಥಾನದ ಕಟ್ಟಡ ನಿರ್ಮಾಣದ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಹಣಮಂತ ದೇವರ ನೂತನ ದೇಗುಲ ನಿರ್ಮಾಣಕ್ಕೆ ಈಗಾಗಲೇ ರೂ. 50 ಲಕ್ಷ ವೈಯಕ್ತಿಕ ದೇಣಿಗೆ ನೀಡಲಾಗಿದ್ದು, ಮುಂಬರುವ ದಿನಗಳಲ್ಲಿ ಉಳಿದ ರೂ 50 ಲಕ್ಷ ನೆರವು ನೀಡಲಾಗುವುದು. ಒಟ್ಟಾರೆಯಾಗಿ ರೂ. 1 ಕೋಟಿ ದೇಣಿಗೆಯನ್ನು ಈ ಪವಿತ್ರ ಕಾರ್ಯಕ್ಕೆ ಸಮರ್ಪಿಸುತ್ತಿರುವುದು ತೃಪ್ತಿ ತಂದಿದೆ. ಭಕ್ತಿ, ಶ್ರದ್ಧೆ, ಸಂಸ್ಕೃತಿ ಹಾಗೂ ಪರಂಪರೆಯ ಪ್ರತೀಕವಾಗಿರುವ ಈ ಪವಿತ್ರ ದೇವಾಲಯದ ನಿರ್ಮಾಣ ಕಾಮಗಾರಿಯು ಗುಣಮಟ್ಟದಿಂದ, ಶೀಘ್ರವಾಗಿ ಪೂರ್ಣಗೊಂಡು ಭಕ್ತಾದಿಗಳ ಸೇವೆಗೆ ಸಮರ್ಪಣೆಯಾಗಲಿ ಎಂದು ಹೇಳಿದರು.



ಗ್ರಾಮದ ಶಿವಯೋಗಿ ಸ್ವಾಮೀಜಿ ಹಾಗೂ ಯೋಗೇಶ್ವರಿ ಅಮ್ಮನವರು ಮಾತನಾಡಿ, ಸಚಿವರ ಸಮಗ್ರ ಅಭಿವೃದ್ಧಿಯ ಕಾರ್ಯ ಹಾಗೂ ಜನಪರ ನಿಲುವನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಶ್ರೀ ನಿಜಲಿಂಗಯ್ಯ ಶಾಸ್ತ್ರಿ, ಮುಖಂಡರಾದ ನಿಂಗನಗೌಡ ಪಾಟೀಲ, ಉಮೇಶ ವಂದಾಲ, ರಾಜೇಂದ್ರಗೌಡ ಪಾಟೀಲ, ವಿ. ಎಸ್. ಪಾಟೀಲ, ರಾಮನಗೌಡ ಪಾಟೀಲ, ಅಪ್ಪುಗೌಡ ಪಾಟೀಲ, ವಿಠ್ಠಲ ಬಾಬಾನಗರ, ವಿಜಯಕುಮಾರ ಮೈಲಾರ, ಬಾಬುಗೌಡ ಪಾಟೀಲ, ಅಪ್ಪುಗೌಡ ಪಾಟೀಲ, ಮಹಾದೇವ ತಳವಾರ, ವಿದ್ಯಾರಾಣಿ ತುಂಗಳ, ಭುವನೇಶ್ವರಿ ಮುಂತಾದವರು ಉಪಸ್ಥಿತರಿದ್ದರು.

ಪರಮಹಂಸ ಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಧಾರವಾಡಮಠ ಸ್ವಾಗತಿಸಿದರು. ಅಶೋಕ ಹಂಚಲಿ ನಿರೂಪಿಸಿದರು.

### ಗುರುವಂದನೆ ಸಲ್ಲಿಸಿದ ಸಚಿವರು

ಇದೇ ವೇಳೆ ಸಚಿವರು ಶ್ರೀ ಶಿವಯೋಗೀಶ್ವರ ಮಹಾಸ್ವಾಮಿಗಳು, ಹಿಮಾಲಯದಿಂದ ಆಗಮಿಸಿದ್ದ ಶ್ರೀ ಸ್ವಾಮಿ ಹರಿಓಂ ಆನಂದ ಭಾರತಿ ಸ್ವಾಮಿಜೀ, ಶ್ರೀ ಶುಭಮುನಿ ರಮೇಶ ಸ್ವಾಮಿಜೀ, ಶ್ರೀ ಸ್ವಾಮಿ ಶಕ್ತಿಜೀ ಹಾಗೂ ಶ್ರೀ ಸ್ವಾಮಿ ಗುಣಾನಂದ ಸರಸ್ವತಿ ಸ್ವಾಮಿಜಿ ಅವರಿಗೆ ಗುರುವಂದನೆ ಸಲ್ಲಿಸಿ, ಅವರ ಆಶೀರ್ವಾದ ಪಡೆದರು.

# ಬಡ ಕುಟುಂಬಗಳಿಗೆ ಹಕ್ಕುಪತ್ರ ವಿತರಣೆ: ಸ್ವಂತ ಸೂರಿನ ಕನಸು ನನಸು



■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಕೊಳಚೆ ಪ್ರದೇಶಾಭಿವೃದ್ಧಿ ವತಿಯಿಂದ ಈಗಾಗಲೇ 321 ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ ಮಾಡಲಾಗಿದೆ. ಅದರಲ್ಲಿ 104 ಫಲಾನುಭವಿಗಳಿಗೆ ಮನೆ ಕಟ್ಟಿಕೊಡಲಾಗಿದೆ. ಇನ್ನು ಅಲ್ಲಿ ಹಲವಾರು ವರ್ಷಗಳಿಂದ ವಾಸಿಸುತ್ತಿರುವವರನ್ನು ಸರಕಾರದಿಂದ ಸಮೀಕ್ಷೆ ಮಾಡಿಸಿ ಉಳಿದವರಿಗೆ 5ಎಕರೆ 8ಗುಂಟೆಯಲ್ಲಿ ಮುಂಬರುವ ದಿನಮಾನಗಳಲ್ಲಿ ನಿವೇಶನ ಹಂಚಿಕೆ ಮಾಡುವ ಕಾರ್ಯ ಮಾಡುತ್ತೇನೆ ಎಂದು ಶಾಸಕ ಅಶೋಕ ಮನಗೂಳಿ ಭರವಸೆ ನೀಡಿದರು.



" ಹಕ್ಕುಪತ್ರ ನೀಡಿದ ಮೇಲೆ ಮನೆಯಲ್ಲಿಯೇ ಇಟ್ಟುಕೊಳ್ಳದೇ ನಿಮಗೆ ನೀಡಿದ ನಿವೇಶನಕ್ಕೆ ಹೋಗಿ ಮನೆಯನ್ನು ಕಟ್ಟಿಕೊಳ್ಳಿ. ಅಲ್ಲಿ ನಿಮಗೆ ಎಲ್ಲ ರೀತಿಯ ಮೂಲಭೂತ ಸೌಲಭ್ಯವನ್ನು ನಗರಸಭೆ ಮತ್ತು ಸರಕಾರದ ವತಿಯಿಂದ ಒದಗಿಸಲಾಗುವುದು."

■ **ಅಶೋಕ ಮನಗೂಳಿ**
**ಶಾಸಕರು, ಸಿಂದಗಿ**

ಸಿಂದಗಿ ನಗರದ ರಾಜರಾಜೇಶ್ವರಿ ಕಲ್ಯಾಣ ಮಂಟಪದಲ್ಲಿ ಮುಖ್ಯಮಂತ್ರಿಗಳ ನಗರ ನಿವೇಶನ ಯೋಜನೆ ಅಡಿಯಲ್ಲಿ ಸಿಂದಗಿ ನಗರಸಭೆ ವತಿಯಿಂದ ಅರ್ಹ ಫಲಾನುಭವಿಗಳಿಗೆ ಹಮ್ಮಿಕೊಂಡ ಹಕ್ಕುಪತ್ರ ವಿತರಿಸಿ ಮಾತನಾಡಿದ ಅವರು, ರಾಜೀವ್ ಗಾಂಧಿ ವಸತಿ ನಿಗಮಕ್ಕೆ 221 ಫಲಾನುಭವಿಗಳ ಪಟ್ಟಿಯನ್ನು ಕಳುಹಿಸಲಾಗಿತ್ತು. 183 ಅರ್ಹ ಫಲಾನುಭವಿಗಳ ಪಟ್ಟಿ ಆಯ್ಕೆಯಾಗಿ ಬಂದಿದೆ. ಸು.40 ತಾಂತ್ರಿಕ ದೋಷದಿಂದ ಹಕ್ಕು ಪತ್ರಗಳಾಗಿಲ್ಲ. ಹಾಗಾಗಿ ಇಂದು 183 ಹಕ್ಕು ಪತ್ರಗಳು ವಿತರಣೆಯಾಗಿ ಬಡ ಕುಟುಂಬಗಳಿಗೆ ತಲುಪುತ್ತಿರುವುದು ಅತ್ಯಂತ ತೃಪ್ತಿ ತಂದಿದೆ.ಸಿಂದಗಿಪುರಸಭೆಯನ್ನುನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಿದ ಮೇಲೆ ಸೂರು ಇಲ್ಲದವರಿಗೆ ಸೂರುವದಗಿಸುವ ಯೋಜನೆ ಹಮ್ಮಿಕೊಳ್ಳಲಾಗಿದೆ. ಸರ್ವೆ ನಂ.24ರಲ್ಲಿ 13ಎಕರೆ ಜಮೀನಿನಲ್ಲಿ ಸೂರು ನೀಡಲು ಅರ್ಹ ಪಲಾನುಭವಿಗಳ ಆಯ್ಕೆ ಮಾಡುವ ಪ್ರಕ್ರಿಯೆ ಪ್ರಾರಂಭವಾಗಿದೆ. ಸಿಂದಗಿ ತಾಲೂಕಿನ ವಿವಿಧ ಭಾಗಗಳಿಂದ ವಲಸೆ ಬಂದು ಸುಮಾರು 30 ವರ್ಷಗಳಿಂದ ನಗರದಲ್ಲಿಯೇ ಜನರು ವಾಸಿಸುತ್ತಿದ್ದಾರೆ. ಅಂತಹ ನಿವೇಶನ ಇಲ್ಲದ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡುವ ಮಹದಾಸೆಯನ್ನು ಹೊಂದಿದ್ದೇನೆ. ಕಟ್ಟ ಕಡೆಯ ವ್ಯಕ್ತಿಗೂ ನಿವೇಶನ ಸಿಗಬೇಕು ಎನ್ನುವ ಗುರಿ ನಮ್ಮದು. ಸರ್ವೆ ನಂ24ರ 13 ಎಕರೆ ಜಮೀನಿನಲ್ಲಿ 550 ನಿವೇಶನಗಳು ತಯ್ಯಾರಿಯಲ್ಲಿವೆ. ಇದಕ್ಕಾಗಿ ಪತ್ರಿಕೆಯ ಮೂಲಕ ಅರ್ಜಿ ಕರೆಯಲಾಗಿತ್ತು. ಅದರಲ್ಲಿ 700 ಅರ್ಜಿಗಳು ಬಂದಿವೆ. ಆದಷ್ಟು ಬೇಗ ಆಶ್ರಯ

ಸಮಿತಿ ಸಭೆ ಮಾಡಿ 550 ಪಲಾನುಭವಿಗಳನ್ನು ಆಯ್ಕೆ ಮಾಡಿ ಇನ್ನು ಒಂದೆರೆಡು ತಿಂಗಳಲ್ಲಿ ಹಂಚಿಕೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಹಿಂದೆ 842/2ರಲ್ಲಿ ವಾಸಿಸುತ್ತಿದ್ದ 84 ಫಲಾನುಭವಿಗಳ ತೆರವು ಕಾರ್ಯಾಚರಣೆಯಲ್ಲಿ ಸರಕಾರ, ನಗರಸಭೆ ಮತ್ತು ತಾಲೂಕು ಆಡಳಿತ, ಜನಪ್ರತಿನಿದಿಗಳು ಪಾತ್ರ ಏನಿಲ್ಲ. ಅದು ಸುಪ್ರೀಂಕೋರ್ಟ್ನ ಆದೇಶದ ಹಿನ್ನೆಲೆಯಲ್ಲಿ ತೆರವುಗೊಳಿಸಲಾಗಿದೆ. ನೊಂದ ಕುಟುಂಬಗಳಿಗೆ ಸೂರು ಕಲ್ಪಿಸುವ ವ್ಯವಸ್ಥೆ ಮಾಡಲಾಗುವುದು. ನಂದ ಕುಟುಂಬಗಳು ಆಶ್ರಯ ಸಮಿತಿಗೆ ಅರ್ಜಿ ಸಲ್ಲಿಸಿ, ಸರ್ಕಾರದ ನಿವೇಶನ ಬೇಕು ಎಂದರೆ ಸರ್ಕಾರದ ನಿವೇಶನ, ನೀವೇ ಜಮೀನು ಖರೀದಿ ಮಾಡುತ್ತೇವೆ ಎಂದರೆ ಜಮೀನಿಗೆ ಬೇಕಾದಂತಹ ಸರಕಾರದ ಅನುದಾನವನ್ನು ಮಂಜೂರು ಮಾಡಿಸಿ ಕೊಡುವೆ. 84 ಕುಟುಂಬಗಳು ನನಗೆ ವೈರಿಗಳಲ್ಲ. ಎಲ್ಲರೂ ನನ್ನ ಮತಕ್ಷೇತ್ರದ ನಿವಾಸಿಗಳು ಎಂದ ಅವರು, ಸರ್ವೆ ನಂ 842/2 ನಿವಾಸಿಗಳು ಇನ್ನು ವಾರ್ಡ್ ನಂ.13ರ ಉದ್ಯಾನವನದ ಜಾಗೆಯಲ್ಲಿ ವಾಸಿಸುತ್ತಿದ್ದ 71 ಕುಟುಂಬಗಳು ನಗರಸಭೆಗೆ ಬಂದು ಅರ್ಜಿ ಸಲ್ಲಿಸಿದರೆ ಮುಂಬರುವ ದಿನಮಾನಗಳಲ್ಲಿ ಸೂರು ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಈ ವೇಳೆ ಪೌರಾಯುಕ್ತ ರವಿ ಶಿರಗುಪ್ಪಿ, ನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಹಣಮಂತ ಸುಣಗಾರ, ಹಾಸಿಂಪೀರ ಆಳಂದ, ಅಬ್ದುಲ್ ರಹೀಮ್ ದುದನಿ, ಶರಣಪ್ಪ ಸುಲ್ಪಿ, ಸಾಯಬಣ್ಣ ಪುರದಾಳ, ಚನ್ನಪ್ಪ ಗೋಣಿ, ಮಲ್ಲು ಸದುಗೋಳ, ಭೀಮು ರೋಡಗಿ, ರಾಜು ಖೇಡ ಸೇರಿದಂತೆ ನಗರಸಭೆ ಸಿಬ್ಬಂದಿಗಳು, ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಫಲಾನುಭವಿಗಳು ಇದ್ದರು.

# ಗಾಂಧಿ ಭವನದಲ್ಲಿ ಡಿಸಿ ಡಾ.ಆನಂದ.ಕೆ ರಿಂದ ಧ್ವಜಾರೋಹಣ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ನಗರದ ಜಿಲ್ಲಾ ಪಂಚಾಯತಿ ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು.

ನಂತರ ಮಾತನಾಡಿದ ಜಿಲ್ಲಾಧಿಕಾರಿಗಳು, ಇಂದು ನಾವು ಅನುಭವಿಸುತ್ತಿರುವ ಸ್ವಾತಂತ್ರ್ಯವು ಸುಲಭವಾಗಿ ಸಿಕ್ಕಿದ್ದಲ್ಲ. ಅಸಂಖ್ಯಾತ ವೀರ ಧೀರರ ತ್ಯಾಗ ಮತ್ತು ಬಲಿದಾನಗಳ ಫಲವಾಗಿ ನಮಗೆ ಸ್ವಾತಂತ್ರ್ಯ ದೊರೆತಿದೆ. ಇಂತಹ ಮಹನೀಯರ ಬಲಿದಾನವನ್ನು ನೆನಪಿಸಿಕೊಳ್ಳುವುದು ಮತ್ತು ಅವ-ರಿಗೆ ಗೌರವ ಸಲ್ಲಿಸುವುದು ಪ್ರತಿಯೊಬ್ಬ ಭಾರತೀಯನ ಆದ್ಯ ಕರ್ತವ್ಯವಾಗಿದೆ ಎಂದು ಸ್ಮರಿಸಿದರು.

ವಿಜಯಪುರ ಜಿಲ್ಲೆಯಲ್ಲಿರುವ ಗಾಂಧಿ ಭವನವು ಮಾದರಿಯಾಗಿದೆ ಎಂದ ಅವರು, ಅತ್ಯಂತ ಪ್ರಶಾಂತ ವಾತಾವರಣದಲ್ಲಿ ಮೈದಾಳಿರುವ ಈ ಭವನವು ಪ್ರತಿಯೊಬ್ಬರಿಗೂ ಸ್ಫೂರ್ತಿ ನೀಡುವ ತಾಣವಾಗಿದೆ. ಮಹಾತ್ಮಾ ಗಾಂಧೀಜಿಯವರು ತಮ್ಮ ಜೀವನದುದ್ದಕ್ಕೂ ಪ್ರತಿಪಾದಿಸಿದ ಅಹಿಂಸೆ, ಸತ್ಯ, ಶಾಂತಿ ಹಾಗೂ ಸರಳತೆಯಂತಹ ಉನ್ನತ ತತ್ವಾದರ್ಶಗಳು ಪ್ರತಿಯೊಬ್ಬರ ಬದುಕಿಗೂ ಬೆಳಕಿದ್ದಂತೆ. ಗಾಂಧೀಜಿಯವರ ಹೋರಾಟದ ಹಾದಿ, ಅವರ ವಿಚಾರಧಾರೆಗಳು ಮತ್ತು ಬದುಕಿನ ಮೌಲ್ಯಗಳ ಸಮಗ್ರ ಮಾಹಿತಿಯನ್ನು ಈ ಭವನವು ಒಳಗೊಂಡಿದೆ. ಇಂದಿನ ಯುವ ಪೀಳಿಗೆ ಗಾಂಧಿ ಭವನಕ್ಕೆ ಭೇಟಿ ನೀಡಿ, ಗಾಂಧೀಜಿಯವರ ಜೀವನದ ಪ್ರಮುಖ ಘಟನಾವಳಿಗಳನ್ನು ವೀಕ್ಷಿಸುವ ಮೂಲಕ ಅವರ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಡಾ.ಸಂತೋಷಕುಮಾರ, ಮಹಿಳಾ ಅಧಿಕಾರಿ ದೀಪಾಕ್ಷಿ ಜಾನಕಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಮರೇಶ ದೊಡಮನಿ, ವಿಜಯಕೃಷ್ಣ, ವೈ.ಭವ್ಯ, ವೈಷ್ಣವಿ ಭಗವತಿ, ಮಿಥುನ, ನಾಗೇಶ

ರತ್ನಾಂಜಲಿ, ಗಾಂಧಿ ಭವನ ನಿರ್ವಹಣಾ ಸಮಿತಿ ಸದಸ್ಯರಾದ ಫಿರೋಜ್ ರೋಜಿಂದಾರ, ಪೀಟರ್ ಅಲೆಕ್ಸಾಂಡರ್, ನೇತಾಜಿ ಗಾಂಧಿ ಸೇ-ರಿದಂತೆ ಹಲವರು ಭಾಗವಹಿಸಿದ್ದರು.

# ಎನ್‌ಕೆ ಆಸ್ಪತ್ರೆಯಲ್ಲಿ ಸ್ವಾತಂತ್ರ್ಯೋತ್ಸವ ಸಂಭ್ರಮಾಚರಣೆ

ಕಲಬುರಗಿ: ನಗರದ ಎನ್‌ಕೆ ಆಸ್ಪತ್ರೆಯಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಅತ್ಯಂತ ಸಂಭ್ರಮ, ದೇಶಭಕ್ತಿ ಮತ್ತು ಉತ್ಸಾಹದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಕಲಬುರಗಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಅಲ್ಲಮಪ್ರಭು ಪಾಟೀಲ್ ಅವರು ಭಾಗವಹಿಸಿ ರಾಷ್ಟ್ರಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು, ಇಂದು ನಾವು ಸ್ವಾತಂತ್ರ್ಯದ ಸವಿಯನ್ನು ಅನುಭವಿಸುತ್ತಿದ್ದೇವೆ ಎಂದರೆ ಅದಕ್ಕೆ ನಮ್ಮ ಮಹಾನ್ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಮತ್ತು ಬಲಿದಾನವೇ ಕಾರಣ. ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ಅರ್ಪಿಸಿದ ಆ ಮಹನೀಯರನ್ನು ಈ ದಿನ ನಾವು ಎಂದಿಗೂ ಮರೆಯಬಾರದು" ಎಂದು ಹೇಳಿದರು. ಈ ಸಂದರ್ಭದಲ್ಲಿ ಆಸ್ಪತ್ರೆಯ ಅಧ್ಯಕ್ಷ ಡಾ. ಆರಿಫ್ ರಝಾ ಅಹ್ಮದ್ ಅವರು ಮಾತನಾಡಿ, "ನಮ್ಮ ಸ್ವಾತಂತ್ರ್ಯ ಹೋರಾಟಗಾರರು ನಮಗೆ ಸುಂದರವಾದ ಮತ್ತು ಸ್ವತಂತ್ರವಾದ ದೇಶವನ್ನು ನೀಡಿದ್ದಾರೆ. ಅವರ ತ್ಯಾಗ, ದೂರದೃಷ್ಟಿ ಮತ್ತು ಕೊಡುಗೆಯಿಂದ ದೇಶವು ಅಭಿವೃದ್ಧಿಯ ಪಥದಲ್ಲಿ ಸಾಗಲು ಸಾಧ್ಯವಾಗಿದೆ. ಅವರ ಆದರ್ಶಗಳು ಹಾಗೂ ಕೊಡುಗೆಗಳ ಫಲವಾಗಿ ಏಮ್ಸ್ ಸೇರಿದಂತೆ ಅನೇಕ ಮಹತ್ವದ ರಾಷ್ಟ್ರೀಯ ಸಂಸ್ಥೆಗಳು ನಿರ್ಮಾಣಗೊಂಡು ದೇಶದ ಅಭಿವೃದ್ಧಿಗೆ ಸೇವೆ ಸಲ್ಲಿಸುತ್ತಿವೆ"ಎಂದು ಹೇಳಿದರು.

# ಮಹಿಳೆಯರಿಂದ ಸಂಭ್ರಮದ ನಾಗರ ಪಂಚಮಿ ಆಚರಣೆ

## ಮನೆ ಮನೆಗಳಲ್ಲಿ ನಾಗಪ್ಪನಿಗೆ ಹಾಲೆರೆಯುವ ಮೂಲಕ ವಿಶೇಷ ಪೂಜೆ । ಪರಸ್ಪರ ಸಿಹಿತಿನಿಸು ಹಂಚಿಕೊಂಡು ಹಬ್ಬದ ಸಂಭ್ರಮ

■ ಉದಯರಶ್ಮಿ ದಿನಪತ್ರಿಕೆ

ಬಾಗಲಕೋಟೆ, (ಜಮಖಂಡಿ): ನಾಗರ ಪಂಚಮಿ ಹಬ್ಬವನ್ನು ಮಹಿಳೆಯರು ಸಂಭ್ರಮ, ಸಡಗರ ಹಾಗೂ ಭಕ್ತಿಭಾವದಿಂದ ಆಚರಿಸಿದರು. ಬೆಳಗ್ಗೆಯಿಂದಲೇ ಮನೆಗಳಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ಮಹಿಳೆಯರು ಸಾಂಪ್ರದಾಯಿಕ ಉಡುಪುಗಳನ್ನು ಧರಿಸಿ ನಾಗದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು.



ಮನೆಯ ನಾಗಪ್ಪನಿಗೆ ಹಾಲೆರೆಯುವುದು, ಅರಿಶಿನ-ಕುಂಕುಮ, ಹೂವುಗಳಿಂದ ಅಲಂಕರಿಸಿ ಪೂಜೆ ಸಲ್ಲಿಸುವುದು ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಬಳಿಕ ನಾಗದೇವರಿಗೆ ಎಳ್ಳುಂಡೆ, ವಿವಿಧ ಬಗೆಯ ಸಿಹಿತಿನಿಸುಗಳು ಹಾಗೂ ನೈವೇದ್ಯ ಅರ್ಪಿಸಿ ಕುಟುಂಬದ ಸುಖ, ಶಾಂತಿ, ಆರೋಗ್ಯ ಮತ್ತು ಸಮೃದ್ಧಿಗಾಗಿ ಪ್ರಾರ್ಥಿಸಲಾಯಿತು.

ನಾಗರ ಪಂಚಮಿಯ ವಿಶೇಷತೆಯಾದ ಎಳ್ಳುಂಡೆ, ಕರ್ಜೂರ, ಉಂಡೆ, ಸಿಹಿ ತಿಂಡಿಗಳು ಸೇರಿದಂತೆ ಸಾಂಪ್ರದಾಯಿಕ ತಿನಿಸುಗಳನ್ನು ಮಹಿಳೆಯರು ಮನೆಯಲ್ಲಿ ತಯಾರಿಸಿ, ನೆರೆಹೊರೆಯವರು ಹಾಗೂ ಬಂಧು-ಬಳಗದವರೊಂದಿಗೆ ಹಂಚಿಕೊಂಡರು. ಮನೆ ಮನೆಗೆ ತೆರಳಿ ಪರಸ್ಪರ ಸಿಹಿತಿನಿಸುಗಳನ್ನು ಕೊಟ್ಟು-ತೆಗೆದುಕೊಂಡು ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಇದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಸಾಂಪ್ರದಾಯಿಕ ಆಚರಣೆಗಳ ಜೊತೆಗೆ ಪರಸ್ಪರ ಬಾಂಧವ್ಯವೂ ಮತ್ತಷ್ಟು ಗಟ್ಟಿಯಾಯಿತು.

ಗ್ರಾಮದ ವಿವಿಧ ಮನೆಗಳಲ್ಲಿ ಬೆಳಗ್ಗಿನಿಂದಲೇ ಪೂಜೆ, ನೈವೇದ್ಯ ಹಾಗೂ ಸಿಹಿತಿನಿಸುಗಳ ತಯಾರಿ ನಡೆಯುತ್ತಿದ್ದು, ಮಹಿಳೆಯರ ಸಂಭ್ರಮದಿಂದ ನಾಗರ ಪಂಚಮಿ ಹಬ್ಬಕ್ಕೆ ವಿಶೇಷ ಕಳೆ ಬಂದಿತ್ತು. ಸಂಪ್ರದಾಯ ಮತ್ತು ಭಕ್ತಿಯೊಂದಿಗೆ ಆಚರಿಸಲಾದ ನಾಗರ ಪಂಚಮಿ ಹಬ್ಬವು ಕುಟುಂಬಗಳಲ್ಲಿ ಸಂತಸ ಮೂಡಿಸುವುದರ ಜೊತೆಗೆ ಜನರಲ್ಲಿ ಪರಸ್ಪರ ಪ್ರೀತಿ, ಸ್ನೇಹ ಮತ್ತು ಸಹೋದರತ್ವದ ಭಾವನೆಯನ್ನು ಹೆಚ್ಚಿಸಿತು.

### ನಾಗರ ಪಂಚಮಿ ನಮ್ಮ ಸಂಪ್ರದಾಯ

"ನಾಗರ ಪಂಚಮಿ ಕೇವಲ ಧಾರ್ಮಿಕ ಆಚ-'ರಣೆಯಲ್ಲ; ಇದು ನಮ್ಮ ಸಂಪ್ರದಾಯ, ಸಂಸ್ಕೃತಿ ಹಾಗೂ ಕುಟುಂಬ ಮತ್ತು ಸಮಾಜದ ನಡುವಿನ ಬಾಂಧವ್ಯವನ್ನು ಬೆಸೆಯುವ ಹಬ್ಬವಾಗಿದೆ. ಮನೆಗಳಲ್ಲಿ ಮಕ್ಕಳಿಗೆ ನಮ್ಮ ಆಚರಣೆಗಳ ಮಹತ್ವವನ್ನು ತಿಳಿಸುವುದು ಅಗತ್ಯ" ಎಂದು ಜಮಖಂಡಿ ತಾಲೂಕಿನ ಚಿಕ್ಕಪಡಸಲಗಿ ಗ್ರಾಮದ ಮಹಿಳೆ ಸುಕನ್ಯಾ ಹನಗಂಡಿ ಎಂಬುವವರು ಅಭಿಪ್ರಾಯಪಟ್ಟರು.

"ಹಬ್ಬದ ಸಂದರ್ಭದಲ್ಲಿ ಮನೆಮಂದಿಯೆಲ್ಲರೂ ಒಟ್ಟಾಗಿ ಪೂಜೆ ಸಲ್ಲಿಸಿ, ಸಿಹಿತಿನಿಸುಗಳನ್ನು ಹಂಚಿಕೊಂಡು ಸಂಭ್ರಮಿಸುವುದು ನಮ್ಮ ಸಂಸ್ಕೃತಿಯ ಸೊಬಗು. ಇಂತಹ ಆಚರಣೆಗಳು ಮುಂದಿನ ಪೀಳಿಗೆಗೂ ನಮ್ಮ ಪರಂಪರೆಯನ್ನು ಪರಿಚಯಿಸುತ್ತವೆ" ಎಂದು ಇನ್ನೊಬ್ಬ ಹಿರಿಯ ಮಹಿಳೆಯೊಬ್ಬರು ಹೇಳಿದರು.

# ಸಿಂದಗಿಯ ವಿವಿಧೆಡೆ 80 ನೆಯ ಸ್ವಾತಂತ್ರ್ಯ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಸ್ವಾತಂತ್ರ್ಯತ್ಸವ ಹೋರಾಟಗಾರರ ತ್ಯಾಗ, ಬಲಿದಾನಗಳ ಫಲವಾಗಿ ಭಾರತ ಸ್ವಾತಂತ್ರ್ಯತ್ಸವ ಹೊಂದಿದ್ದು, ಸ್ವಾತಂತ್ರ್ಯತ್ಸವವು ದೇಶದ ರಾಜ-ಕೀಯ, ಆರ್ಥಿಕ, ಶೈಕ್ಷಣಿಕ ಸೇರಿದಂತೆ ವಿವಿಧ ಕ್ಷೇತ್ರಗಳ ಪ್ರಗತಿಯನ್ನು ಸ್ಮರಿಸುವ ಮಹತ್ವದ ದಿನವಾಗಿದೆ ಎಂದು ಸಂಸ್ಥೆಯ ನಿರ್ದೇಶಕ ಪಿ.ಡಿ.ಕುಲಕರ್ಣಿ ಹೇಳಿದರು.

ಸಿಂದಗಿ ಪಟ್ಟಣದ ಶ್ರೀ ಸಮರ್ಥ ವಿದ್ಯಾವಿಕಾಸ ವಿವಿದೊದ್ದೇಶಗಳ ಸಂಸ್ಥೆಯ ಪ್ರೇರಣಾ ಶಿಶುನಿಕೇತನ, ವಿದ್ಯಾನಿಕೇತನ ಪ್ರಾಥಮಿಕ ಶಾಲೆ, ಪ್ರೇರಣಾ ಪ್ರಾಥಮಿಕ ಶಾಲೆ,

ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಸಹಯೋಗದಲ್ಲಿ ಹಮ್ಮಿಕೊಂಡ 80ನೆಯ ಸ್ವಾತಂತ್ರ್ಯತ್ಸವ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ದೇಶಭಕ್ತಿ, ತ್ಯಾಗ ಮತ್ತು ಬ್ರಿಟಿಷರ ವಿರುದ್ಧದ ಹೋರಾಟ ಯುವಜನರಿಗೆ ಹಾಗೂ ವಿದ್ಯಾರ್ಥಿಗಳಿಗೆ ಮಾದರಿಯಾಗಿದೆ. ಮಕ್ಕಳು ದೇಶದ ಹಿರಿಮೆ ಅರಿತು, ರಾಷ್ಟ್ರದ ಏಕತೆ ಮತ್ತು ಸಮಗ್ರ ಅಭಿವೃದ್ಧಿಗಾಗಿ ಶ್ರಮಿಸಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಆಕರ್ಷಕ ಪಥಸಂಚಲನ ನಡೆಸಿ ಗೌರವ ವಂದನೆ ಸಲ್ಲಿಸಿದರು. ಶ್ರೀರಕ್ಷಾ ಬಿರಾದಾರ ಪಥ ಸಂಚಲನದ ನೇತೃತ್ವ ವಹಿಸಿದ್ದರು.

ಶಾಲಾ ಸಂಸತ್ತಿನ ಪ್ರಧಾನ ಕಾರ್ಯದರ್ಶಿ ಕುಮಾರ ಮಲ್ಲನಗೌಡ ಸೋಮಜಾಳ, ಕೃತಿ ದೇಶಮುಖ ಹಾಗೂ ವೈಭವ ಬಾಗಲಕೋಟ ಗೌರವ ವಂದನೆ ಸಲ್ಲಿಸಿದರು. ನಿರಜದತ್ತ ಕುಲಕರ್ಣಿ, ದೇವರಾಜ ಕರ್ನಾಳ, ಅರುಣ ಬಿರಾದಾರ ಹಾಗೂ ಅಮೀತ ಅಗಸಬಾಳ ನೇತೃತ್ವದ ವಾದ್ಯಗೋಷ್ಠಿ ತಂಡ ಉತ್ತಮ ಪ್ರದರ್ಶನ ನೀಡಿತು. ವಿದ್ಯಾರ್ಥಿಗಳು ದೇಶಭಕ್ತಿ ಸಾರುವ ವಿವಿಧ ಸಾಂಸ್ಕೃತಿ-ಕ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಿದರು. ಪಿರಾಮಿಡ್, ರೈತ ಮತ್ತು ಸೈನಿಕರ ನೃತ್ಯ ಸೇರಿದಂತೆ ಸಾಹಸ ಹಾಗೂ ದೇಶಭಕ್ತಿ ಪ್ರದರ್ಶನಗಳು ಗಮನ ಸೆಳೆದವು.

ಸಂಸ್ಥೆಯ ಅಧ್ಯಕ್ಷ ಆರ್.ಡಿ. ಕುಲಕರ್ಣಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮುಖ್ಯಗುರುಮಾತೆ ಎಂ.ಪಿ.ಬುಕ್ಕಾ, ಎಸ್.ಆಯ್.ಅಸ್ಕಿ, ಪಾಲಕ ಪ್ರತಿನಿಧಿ ಲಕ್ಷ್ಮಿ ಗುಗ್ಗರಿ ಸೇ-ರಿದಂತೆ ಶಾಲೆಯ ಬೋಧಕ-ಬೋಧಕೇತರ ಸಿಬ್ಬಂದಿಗಳು, ಪಾಲಕರು ಹಾಗೂ ವಿದ್ಯಾರ್ಥಿಗಳು ಇದ್ದರು. ವಿ.ಎ.ನಾಯಕ ಸ್ವಾಗತಿಸಿದರು. ಶಿಲ್ಪಾ ಪಾಟೀಲ ವಂದಿಸಿದರು. ಸತೀಶ ಕುಲಕರ್ಣಿ ಹಾಗೂ ಜಿ.ಎಸ್.ಯಂಕಂಚಿ ನಿರೂಪಿಸಿದರು.

ಶ್ರೀ ಪದ್ಮರಾಜ ಮಹಿಳಾ ಕಾಲೇಜು

ಪಟ್ಟಣದ ಶ್ರೀ ಪದ್ಮರಾಜ ಮಹಿಳಾ ಕಾಲೇಜಿನಲ್ಲಿ ಜರುಗಿದ 80ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯ ಅಂಗವಾಗಿ ಪ್ರಾಚಾರ್ಯ ವಿಮಲಕಾಂತ ಪಾಟೀಲ ಧ್ವಜಾರೋಹಣ ನೇರವೇರಿಸಿ ಮಾತನಾಡಿದ ಅವರು, ಇಂದಿನ ಸಮಾಜದಲ್ಲಿರುವ ಹಲವಾರು ಸಮಸ್ಯೆಗಳನ್ನು ನಿವಾರಿಸಲು ನಾವು ನಮ್ಮ ಜ್ಞಾನವನ್ನು ಹೆಚ್ಚಿಸಿಕೊಂಡು ದೇಶ ಸೇವೆಗೆ ಮುಂದಾಗಬೇಕಿದೆ ಎಂದು ಪ್ರಾಚಾರ್ಯ ವಿಮಲಕಾಂತ ಪಾಟೀಲ ಹೇಳಿದರು.

ಇದೇ ವೇಳೆ ಪದವಿ ಕಾಲೇಜಿನ ಪ್ರಾಚಾರ್ಯ ಎಸ್.ಎಮ್.ಪೂಜಾರಿ, ಉಪನ್ಯಾಸಕರಾದ ಮಹಾಂತೇಶ ನೂಲಾನವರ, ಜಿ.ಎ.ನಂದಿಮಠ, ಜಿ.ಎಸ್.ಕುಲಕರ್ಣಿ, ಸಾಯಬಣ್ಣ ಸಜ್ಜನ, ರೇವಣಸಿದ್ದ ಹಾಲಕೇರಿ, ಎಮ್.ಕೆ.ಬಿರಾದಾರ, ಎಸ್.ಸಿ.ದುದ್ದಗಿ, ಹೇಮಾ ಕಾಸರ, ಹೇಮಾ ಹಿರೇಮಠ, ಜಿ.ವಿ ಪಾಟೀಲ್, ಪೂಜಾ ಆಲಮೇಲ, ಶ್ರೀದೇವಿ ದುದ್ದಗಿ, ಬಸಮ್ಮ ಧರಿ, ಯು.ಸಿ.ಪೂಜೇರಿ, ಎ.ಆರ್.ರಜಪೂತ ಸೇರಿದಂತೆ ಮಾಹಾವಿದ್ಯಾಲಯದ ಬೋಧಕೇತರ ಸಿಬ್ಬಂದಿಗಳು ಇದ್ದರು.

ಮಹಿಳಾ ವಸತಿ ನಿಲಯ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಡಿಯಲ್ಲಿ ಶ್ರೀಧರಸ್ವಾಮಿ ವಿದ್ಯಾವರ್ಧಕ ಸಂಘ ನಡೆಸುವ ಮಹಿಳಾ ವಸತಿ ನಿಲಯದಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಹಮ್ಮಿಕೊಂಡ ಧ್ವಜಾರೋಹಣವನ್ನು ಸಿಡಿಪಿಓ ಅನೀಲ ಹಳ್ಳಿ ನೆರವೇರಿಸಿದರು.

ಈ ವೇಳೆ ವಸತಿ ನಿಲಯದ ಮೇಲ್ವಿಚಾರಕಿ ಜಯಶ್ರೀ ಬಿರಾದಾರ, ಮಹಿಳಾ ಸಾಂತ್ವನ ಸಹಾಯವಾಣಿ ಕೇಂದ್ರದ ಸಿಬ್ಬಂದಿ ರಶ್ಮಿ ನೂಲಾನವರ, ವಿದ್ಯಾವತಿ ದೇಸಾಯಿ ಸೇ-ರಿದಂತೆ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

ಶ್ರೀ ಗುರುಕೃಪಾ ಶಾಲೆ

ಸಿಂದಗಿ ನಗರದ ಶ್ರೀ ಗುರುಕೃಪಾ ಆಂಗ್ಲ ಮಾಧ್ಯಮ ಶಾಲೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ದೇಶಭಕ್ತಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ರಾಷ್ಟ್ರಧ್ವಜಾರೋಹಣವನ್ನು ಡಾ.ಗಿರೀಶ್ ಕುಲಕರ್ಣಿ ನೆರವೇ-ರಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯಗುರುಮಾತೆ ಹೇಮಾ ಪೊತದಾರ್ ಕಾರ್ಯದರ್ಶಿ ಹೆಚ್.ಜಿ.ಪೊತದಾರ್ ಸೇರಿದಂತೆ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಇದ್ದರು.

# ರೂ.2ಕೋಟಿ ವೆಚ್ಚದ ಕಾಮಗಾರಿಗೆ ಶಾಸಕ ಮನಗೂಳಿ ಭೂಮಿಪೂಜೆ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ನಗರದಲ್ಲಿ ನೂತನ ರಸ್ತೆಗಳನ್ನು ನಿರ್ಮಿಸುವುದರ ಜೊತೆಗೆ ವಿದ್ಯುತ್ ದೀಪಗಳಿಂದ ನಗರವನ್ನು ಅಲಂಕರಿಸುವ ಮಹದಾಸೆ ಹೊಂದಿದ್ದೇನೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ನಗರದ ಸ್ವಾಮಿ ವಿವೇಕಾನಂದ ವೃತ್ತದಲ್ಲಿ ಲೋಕೋಪಯೋಗಿ ಇಲಾಖೆಯ 2025-26ನೇ ಸಾಲಿನ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ರೂ.2ಕೋಟಿ ವೆಚ್ಚದಲ್ಲಿ ಕೈಗೊಳ್ಳಲಿರುವ ಬೀದಿ ದೀಪ ಅಳವಡಿಕೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಸಿಂದಗಿ ನಗರ ವೇಗವಾಗಿ ಬೆಳೆಯುತ್ತಿದ್ದು, ರಸ್ತೆ, ಬೀದಿ ದೀಪ ಹಾಗೂ ಉದ್ಯಾನವನಗಳ ಅಭಿವೃದ್ಧಿಗೆ ವಿಶೇಷ ಅನುದಾನ ಮೀಸಲಿಡಲಾಗಿದೆ. ಈಗಾಗಲೇ 34 ರಸ್ತೆಗಳ ನಿರ್ಮಾಣಕ್ಕೆ ಮಂಜೂರಾತಿ ದೊರೆತಿದ್ದು, 8 ರಸ್ತೆಗಳ ಕಾಮಗಾರಿ ಆರಂಭಗೊಂಡಿದೆ. ಉಳಿದ ರಸ್ತೆಗಳಿಗೂ ಶೀಘ್ರದಲ್ಲೇ ಭೂಮಿಪೂಜೆ ನೆರವೇರಿಸಲಾಗುವುದು ಎಂದು ಹೇಳಿದರು. ನಗರದಲ್ಲಿ 27 ಕಿ.ಮೀ. ಉದ್ದದ ಸಿಸಿ ರಸ್ತೆ ನಿರ್ಮಾಣಕ್ಕೆ ರೂ.20 ಕೋಟಿ ಅನುದಾನದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ. ಶೀಘ್ರದಲ್ಲೇ ಮಂಜೂರಾತಿ ಪಡೆದು ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದರು.

ಸಿಂದಗಿ ನಗರದ ಒಟ್ಟು ಆರು ಪ್ರಮುಖ ರಸ್ತೆಗಳಿಗೆ ನೂತನ ವಿದ್ಯುತ್ ಕಂಬಗಳ ಮಂಜೂರಾತಿ ದೊರೆತಿದೆ. ಸಂಗಮ್ ಬಾರ್‌ನಿಂದ ಹಳೆ ಚಾಂದಕವಟೆ ರಸ್ತೆವರೆಗೆ 16, ಸಾಲುಮರದ ತಿಮ್ಮಕ್ಕ ಟ್ರೀ ಪಾರ್ಕ್‌ವರೆಗೆ 20, ವಿವೇಕಾನಂದ ವೃತ್ತದಿಂದ ಟಿಪ್ಪು ಸುಲ್ತಾನ್ ವೃತ್ತದವರೆಗೆ 28, ಸಿಂದಗಿ ಕೋಡಂಗಲ್ ರಸ್ತೆಯಿಂದ ಹೆಗ್ಗರೇಶ್ವರ ದೇವಸ್ಥಾನದವರೆಗೆ 25, ಚಿಕ್ಕಸಿಂದಗಿ ಕ್ರಾಸ್‌ನಿಂದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದವರೆಗೆ 17 ಹಾಗೂ ವಿವೇಕಾನಂದ ವೃತ್ತದಿಂದ ಬಂದಾಳ ರಸ್ತೆ ಶಾಂತವೀರ ನಗರದ 2ನೇ ಅಡ್ಡ ರಸ್ತೆಯವರೆಗೆ 40 ವಿದ್ಯುತ್ ಬೀದಿ ದೀಪದ ಕಂಬಗಳನ್ನು ಅಳವಡಿಸಲಾಗುವುದು ಎಂದು ತಿಳಿಸಿದರು. ಕಾಮಗಾ-ರಿಗಳನ್ನು ಆದಷ್ಟು ಬೇಗ ಆರಂಭಿಸಿ ಗುಣಮಟ್ಟದಿಂದ ಪೂರ್ಣಗೊಳಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚಿಸಿದರು.

### ಸಿಬ್ಬಂದಿ ಕೊರತೆ

"ಸಿಂದಗಿ ನಗರದಲ್ಲಿ 23 ವಾರ್ಡ್ಗಳಿದ್ದು, ಸುಮಾರು 60 ಸಾವಿರ ಜನಸಂಖ್ಯೆ ಇದೆ. ಆದರೆ ನಗರಸಭೆಯಲ್ಲಿ ಕೇವಲ 53 ಸಿಬ್ಬಂದಿ ಕಾರ್ಯನಿರ್ವಹಿಸುತ್ತಿರುವುದರಿಂದ ಆಡಳಿತ ವ್ಯವಸ್ಥೆಯಲ್ಲಿ ಸಮಸ್ಯೆಯಾಗುತ್ತಿದೆ. ನಗರಸಭೆಯಾಗಿ ಮೇಲ್ದರ್ಜೆಗೇರಿದ ಹಿನ್ನೆಲೆಯಲ್ಲಿ ಒಟ್ಟು 121 ಹುದ್ದೆಗಳ ಅವಶ್ಯಕತೆ ಇದೆ. ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಹುದ್ದೆಗಳು ಮಂಜೂರಾದರೆ ಸಿಬ್ಬಂದಿ ಕೊರತೆಗೆ ಶಾಶ್ವತ ಪರಿಹಾರ ದೊರೆಯಲಿದೆ."

■ **ಅಶೋಕ ಮನಗೂಳಿ**
**ಶಾಸಕರು, ಸಿಂದಗಿ**

# ದೇವರಹಿಪ್ಪರಗಿ ವಿವಿಧೆಡೆ ಸ್ವಾತಂತ್ರೋತ್ಸವ ದಿನ ಆಚರಣೆ

**ಸಮೃದ್ಧಿ ಸಹಕಾರ ಸಂಘದಲ್ಲಿ ಅಧ್ಯಕ್ಷೆ ಸಂಗೀತಾ ನಾಯಿಕ್ ರಿಂದ ಧ್ವಜಾರೋಹಣ**



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಪಟ್ಟಣದ ಶಾಲಾ, ಕಾಲೇಜು, ಸರ್ಕಾರಿ ಕಚೇರಿ, ಬ್ಯಾಂಕ್, ಸಹಕಾರಿ ಸಂಘಗಳು ಸೇರಿದಂತೆ ತಾಲ್ಲೂಕಿನ ವಿವಿಧೆಡೆಯಲ್ಲಿ ಧ್ವಜಾರೋಹಣ ನೆರವೇರಿಸಿ 80ನೇ ಸ್ವಾತಂತ್ರೋತ್ಸವ ದಿನ ಆಚರಿಸಲಾಯಿತು.

ಸಮೃದ್ಧಿ ಸಹಕಾರ ಸಂಘ

ಧ್ವಜಾರೋಹಣವನ್ನು ಅಧ್ಯಕ್ಷೆ ಸಂಗೀತಾ ನಾಯಿಕ್ ಹಾಗೂ ಉಪಾಧ್ಯಕ್ಷ ರಿಯಾಜ್ ತಾಂಬೋಳಿ ನೆರವೇರಿಸಿದರು.

ಗಣ್ಯರಾದ ಡಾ.ಆರ್.ಆರ್.ನಾಯಿಕ್, ನಿರ್ದೇಶಕರಾದ ಪಿ.ಜಿ.ಹಿರೇಮಠ, ಬಿ.ಎನ್.ಬಬಲೇಶ್ವರ, ವೆಂಕಟೇಶ ಕುಲಕರ್ಣಿ, ಎ.ಕೆ.ಹಿರೇಮಠ, ಕೆ.ಎಸ್.ಕೋರಿ, ಗುರು ಕರಭಂಟನಾಳ, ಮಂಜುನಾಥ ಒಂಟೆತ್ತಿನ, ಉಮೇಶ ಹಳಪಾಣಿ, ಸುಭಾಸ್ ಜಾಧವ, ಅಯ್ಯನಗೌಡ ಬಿರಾದಾರ(ಹರನಾಳ) ಹಾಗೂ ಸಿಬ್ಬಂದಿ ಇದ್ದರು.

ತಾಲ್ಲೂಕು ನಿವೃತ್ತ ನೌಕರರ ಸಂಘ 80ನೇ ಸ್ವಾತಂತ್ರ್ಯ ಧ್ವಜಾರೋಹಣವನ್ನು ಸಂಘದ ಅಧ್ಯಕ್ಷ ಸಿ.ಕೆ.ಕುದರಿ ನೆರವೇರಿಸಿದರು.

ಎಂ.ಆರ್ .ಶಿರಸಂಗಿಮಠ, ರತ್ನಾಕರ, ಕೆ.ಸಿ.ಮಠ, ಎಸ್.ವಿ. ಆಲಾಳಮಠ, ಪಿ. ಎಸ್.ಮಿಂಚನಾಳ, ಶಾಂತಪ್ಪ ಪಡನೂರ, ಎಂ.ಎಂ. ಕಠಾರಿ, ಪಿ.ಜಿ.ಹಿರೇಮಠ, ಬಿ.ಎನ್.ಬಬಲೇಶ್ವರ, ಜಿ.ಎ.ಪಾಟೀಲ, ಎಸ್.ಜಿ.ತಾವರಖೇಡ, ಪಿ.ಎಚ್.ಪಟೇಲ, ಮಡ್ಡೇಪ್ಪಗೋಳ. ಕೆ.ಎನ್. ಮಣ್ಣೂರ, ಬಿ.ಜಿ.ಪಾಟೀಲ ಸಹಿತ ಇತರರು ಇದ್ದರು.

ಯಾಳವಾರ ಶ್ರೀ ಸೋಮೇಶ್ವರ ಸಂಂ–ಯುಕ್ತ ಪದವಿಪೂರ್ವ ಕಾಲೇಜ ಸಂಸ್ಥೆಯ ಅಧ್ಯಕ್ಷ ರಾಜುಗೌಡ ನಾಡಗೌಡ್ರ ಧ್ವಜಾರೋಹಣ ನೆರವೇ–ರಿಸಿದರು.

ಸಂಸ್ಥೆಯ ಬಿ.ಆರ್.ಪಾಟೀಲ, ಎಸ್.ಎಸ್. ಥಬ್ಬಣ್ಣವರ, ಆರ್.ಎಸ್.ಪಾಟೀಲ, ಎ.ಡಿ.ನಾಗರಾಳ, ನಿವೃತ್ತಸೈನಿಕ ಬಸವರಾಜ ಶಾಬಾದಿ, ಎಚ್.ಪಿ.ಕರಡಿ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

ಮುಳಸಾವಳಗಿ ಗ್ರಾಮದ ಮಲ್ಲಿಕಾರ್ಜುನ ದೇವಸ್ಥಾನ ಇಲ್ಲಿ ಮಧ್ಯರಾತ್ರಿ 12ಗ0ಟೆಗೆ 79ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಧ್ವಜಾರೋಹಣ ನೆರವೇರಿಸಲಾಯಿತು.

ಶಿಕ್ಷಕ ಜಿ.ಪಿ.ಬಿರಾದಾರ, ಸಂಗನಗೌಡ ಬಿರಾದಾರ, ಹಣಮಂತ ಹಿರೂರ, ವಿರುಪಾಕ್ಷಿ ರೋಡಗಿ, ಶ್ರೀಶೈಲ ಹದರಿ, ಸಾಹೇಬಗೌಡ ಬಿರಾದಾರ, ಉಮೇಶ ರೋಡಗಿ, ನಾಗರಾಜ ಸರಬಡಗಿ, ಪ್ರದೀಪ ಬಿರಾದಾರ, ಸಂತೋಷ ಬಿರಾದಾರ, ನವೀನ ಉಕುಮನಾಳ, ಪ್ರವೀಣ ಅಂಕಲಗಿ ಇದ್ದರು.

### ರಾಣಿ ಚೆನ್ನಮ್ಮ ಸಹಕಾರಿ ಸಂಘ

**ಪಟ್ಟಣದ ರಾಣಿ ಚೆನ್ನಮ್ಮ ಸಹಕಾರಿ ಸಂಘದಲ್ಲಿ ಚನ್ನವೀರ ಕುದರಿ ಧ್ವಜಾರೋಹಣ ನೆರವೇರಿಸಿದರು. ಕಾಸುಗೌಡ ಬಿರಾದಾರ(ಜಲಕಾಂತಿ), ಕಲ್ಲನಗೌಡ ಬಿರಾದಾರ, ವಿನೋದ ಪಾಟೀಲ, ಮಲ್ಲಿಕಾರ್ಜುನ ಒಂಟೆತ್ತಿನ, ಶಾಂತಗೌಡ ಬಿರಾದಾರ, ಗುಂಡು ದೇವಣಗಾಂವ, ಮಡು ಬಿರಾದಾರ, ಕಾಶೀನಾಥ ರಾಮಗೊಂಡ ರವಿ ಸಿಂಧೂರ, ನಿಂಗನಗೌಡ ಜಲಕಾಂತಿ, ಯಾಳಗಿ, ನವೀನ ಕೋಟಿನ್ ಇದ್ದರು.**

# ಸಂಕಷ್ಟದಲ್ಲಿರುವ ನಾಡಿನ ರೈತರ ಪರ ನಮ್ಮ ಸರಕಾರವಿದೆ



■ ಉದಯರಶ್ಮಿ ದಿನಪತ್ರಿಕೆ

### ವಿಜಯಪುರ ಜಿಲ್ಲೆಯಲ್ಲಿ ಸಚಿವ ಎಂ.ಬಿ.ಪಾಟೀಲ ಅವರಿಂದ ಬರ ಪರಿಸ್ಥಿತಿ ಹಾಗೂ ಬೆಳೆ ವೀಕ್ಷಣೆ

ವಿಜಯಪುರ: ತೀವ್ರ ಮಳೆ ಅಭಾವದಿಂದಾಗಿ ಜಿಲ್ಲೆಯಲ್ಲಿ ಎದುರಾಗಿರುವ ಬರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಬಿ.ಪಾಟೀಲ ಅವರು, ಭಾನುವಾರ ಜಿಲ್ಲೆಯಾದ್ಯಂತ ರೈತರ ಜಮೀನುಗಳಿಗೆ ಖುದ್ದು ಭೇಟಿ ನೀಡಿ ಹಾನಿಗೀಡಾದ ಬೆಳೆಗಳನ್ನು ಪರಿಶೀಲಿಸಿ, ಸಂಕಷ್ಟದಲ್ಲಿರುವ ರೈತರ ಪರ ನಮ್ಮ ಸರ್ಕಾರವಿದೆ ಎಂದು ಭರವಸೆ ನೀಡಿದರು.

ಇಂಡಿ ತಾಲೂಕಿನ ಹೊರ್ತಿ ಗ್ರಾಮದ ರೈತ ಮಾಳಪ್ಪ ಸೊನಕನಹಳ್ಳಿ ಅವರ 6 ಎಕರೆ ಜಮೀನಿನಲ್ಲಿ ಒಣಗುತ್ತಿರುವ ತೊಗರಿ ಬೆಳೆಯನ್ನು ಸಚಿವರು ವೀಕ್ಷಿಸಿದರು.

ಈ ವೇಳೆ ರೈತರ ಸಮಸ್ಯೆಯನ್ನು ಸಹಾನುಭೂತಿಯಿಂದ ಆಲಿಸಿದ ಸಚಿವರು, ನಮ್ಮ ಸರ್ಕಾರವು ಸಂಕಷ್ಟದಲ್ಲಿರುವ ರೈತರ ಪರವಾಗಿ ನಿಲ್ಲುತ್ತದೆ. ರೈತರ ಕಷ್ಟ–ನಷ್ಟಗಳನ್ನು ತಿಳಿದುಕೊಳ್ಳಲು ಜಿಲ್ಲೆಯಾದ್ಯಂತ ಪ್ರವಾಸ ಕೈಗೊಳ್ಳಲಾಗಿದ್ದು, ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ವೈಜ್ಞಾನಿಕ ವರದಿ ಸಿದ್ಧಪಡಿಸಲು ಈಗಾಗಲೇ ಸೂಚನೆ ನೀಡಲಾಗಿದೆ. ಈ ಸಮಗ್ರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ರೈತರಿಗೆ ಸೂಕ್ತ ಪರಿಹಾರ ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಶೇ.ನೂರರಷ್ಟು ಹಾನಿ: ಇಂಡಿ ತಾಲೂಕಿನಲ್ಲಿ ಶೇ.100 ರಷ್ಟು ಬೆಳೆಗಳು ಹಾನಿಗೀಡಾಗಿವೆ. ಕಳೆದ ವಾರ ಕೆಲ ಕಡೆ ಭೇಟಿ ನೀಡಿದ ವೇಳೆ ಅಲ್ಲಿಯ ಬೆಳೆಗಳು ಶೇ. 80ರಷ್ಟು ಹಾಳಾಗಿದ್ದವು. ಈಗ ಶೇ. 20 ರಷ್ಟು ಹಾನಿಯಾಗಲಿವೆ. ಹಾಗಾಗಿ ರೈತರು ಬೆಳೆದ ಬೆಳೆಗಳು ಸಂಪೂರ್ಣ ಹಾನಿಗೀಡಾಗಿವೆ ಎಂದು ಸಚಿವರು ತಿಳಿಸಿದರು.

ರೈತರ ಸಮಸ್ಯೆಯನ್ನು ಖುದ್ದಾಗಿ ಅನುಭವಿಸಿದೆ. ಅವರೆಲ್ಲ ತೀವ್ರ ಸಂಕಷ್ಟದಲ್ಲಿ ಇದ್ದಾರೆ. ಈ ಸತ್ಯ ಅರಿತಿರುವ ನಮ್ಮ ಸರ್ಕಾರ ರೈತರ ನೆರವಿಗೆ ಬರಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಇಂಡಿ ತಾಲೂಕಿನಲ್ಲಿ 42 ಸಾವಿರ ರೈತರು ಬೆಳೆ ವಿಮೆ ನೋಂದಣಿ ಮಾಡಿಸಿಕೊಂಡಿದ್ದಾರೆ. ಈ ಬಾರಿ ಜಿಲ್ಲಾದ್ಯಂತ 2.50 ಲಕ್ಷ ರೈತರು ಬೆಳೆ ವಿಮೆ ಮಾಡಿಕೊಂಡಿದ್ದಾರೆ ಎಂದು ಸಚಿವರು ವಿವರಿಸಿದರು.

ಜಿಲ್ಲೆಯ ಹಲವು ತಾಲೂಕುಗಳಲ್ಲಿ ಕನಿಷ್ಠ ಪ್ರಮಾಣದ ಬಿತ್ತನೆಯಾಗಿದ್ದು, ಮುಂಗಾರು ಮಳೆಯ ಸಕಾಲದಲ್ಲಿ ಬಾರದೇ ಇರುವುದ–ರಿಂದ ರೈತರು ತೀವ್ರ ಸಮಸ್ಯೆಯಲ್ಲಿದ್ದಾರೆ. ಕೃಷಿ ಜಮೀನುಗಳಿಗೆ ನೇರ ಭೇಟಿ ನೀಡಿ ಬೆಳೆ ಬೆಳವಣಿಗೆ ನೈಜ ಚಿತ್ರಣ ಪಡೆಯುವುದರ ಜೊತೆಗೆ, ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ಲಭ್ಯತೆಯ ಕು–ರಿತು ಪರಿಶೀಲಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಜಮೀನುಗಳಲ್ಲಿ ತೇವಾಂಶವಿಲ್ಲ. ಒಂದ ಫೀಟ್ ಬೆಳೆ ಇದೆ.ಹಸಿ ಮಳೆಯಾಗದೇ ಇರುವುದ–ರಿಂದ ಸಮಸ್ಯೆಯಾಗಿದೆ. ತೇವಾಂಶವಿಲ್ಲದೇ ಬೆಳೆ ಒಣಗಿವೆ. ನೀರು ಜಾಸ್ತಿ ಹಿಂಗದೇ ಬೆಳೆ ಬೆಳವಣಿಗೆ ಆಗಿಲ್ಲ ಎಂದರು.

ರೈತರ ಸಂಕಷ್ಟ ಆಲಿಸಿದ ಸಚಿವರು, ಶಕ್ತಿ ಮೀರಿ ಸರ್ಕಾರ ರೈತರ ನೆರವಿಗೆ ನಿಲ್ಲಲಿದೆ. ಜಿಲ್ಲೆಯ ಎಲ್ಲ ಭಾಗದಲ್ಲೂ ಈ ಸಮಸ್ಯೆಯಿದೆ. ನಿಮ್ಮ ಜೊತೆ ನಾವಿದ್ದೇವೆ. ಮಳೆಯಾಧಾ–ರಿತ ಬೆಳೆ ಬೆಳವಣಿಗೆ ಕುಂಠಿತವಾಗಿವೆ. ಈ ಸಮಸ್ಯೆಯನ್ನು ಮುಖ್ಯಮಂತ್ರಿಗಳಿಗೆ ಮನವ–ರಿಕೆ ಮಾಡಿಕೊಡಲಾಗುವುದು. ಸರಕಾರಕ್ಕೆ ನಿಮ್ಮ ಸಮಸ್ಯೆ ತಿಳಿದಿದೆ. ಸಿಎಂ ಅವರಿಗೆ ಹಾಗೂ ಕೇಂದ್ರ ಸರ್ಕಾರಕ್ಕೆ ನಾನು ಸೇರಿದಂತೆ ಈ ಭಾಗದ ಶಾಸಕರು ಸೇರಿ ಮನವಿ ಮಾಡಿ, ಸೂಕ್ತ ಪರಿಹಾರ ಕೊಡಿಸಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ, ತೋಟಗಾರಿಕಾ ಇಲಾಖೆಯ ಜಂಟಿ ನಿರ್ದೇಶಕ ಸಿದ್ರಾಮ ಬರಗಿಮಠ ಸೇರಿದಂತೆ ವಿವಿಧ ಜಿಲ್ಲಾ ಹಾಗೂ ತಾಲೂಕು ಮಟ್ಟದ ಹಿರಿಯ ಅಧಿಕಾರಿಗಳು ಮತ್ತು ರೈತರು ಸಾರ್ವಜನಿಕರು ಉಪಸ್ಥಿತರಿದ್ದರು.

# ಸಹಕಾರಿ ಬ್ಯಾಂಕುಗಳು ರೈತರಿಗೆ ವರದಾನ :ಸಚಿವ ಎಂ.ಬಿ.ಪಾಟೀಲ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸಹಕಾರಿ ಬ್ಯಾಂಕುಗಳು ರೈತರಿಗೆ ಸಂಕಷ್ಟ ದಿನಗಳಲ್ಲಿ ವರದಾನವಾಗಿವೆ ಎಂದು ಕೈಗಾರಿಕೆ, ಮೂಲ ಸೌಲಭ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಶನಿವಾರ ಬಬಲೇಶ್ವರ ತಾಲೂಕಿನ ಶಿರಬೂರ ಗ್ರಾಮದಲ್ಲಿ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಬೃಹತ್ ಕಟ್ಟಡದ ಗೋದಾಮು ಉದ್ಘಾಟಿಸಿ ಅವರು ಮಾತನಾಡಿದರು.

ಈಗ ಕೃಷಿ ಕ್ಷೇತ್ರ ಕಷ್ಟಕರವಾಗಿದೆ. ಆಲಮಟ್ಟಿ ಜಲಾಶಯ ಎತ್ತರ 524.256 ಮೀ. ಪೂರ್ಣವಾದರೆ ರೈತರ ಗೋಳು ನೀಗಲಿದೆ. ಸದ್ಯ ತೀವ್ರ ಬರಗಾಲದ ಪರಿಸ್ಥಿತಿ ಇದೆ. ರೈತರು ಎರಡು ಮೂರು ಬಾರಿ ಬಿತ್ತನೆ ಮಾಡಿ ಸೋತಿ–ದ್ದಾರೆ. ಜಗತ್ತಿನಲ್ಲಿ ಪ್ರಕೃತಿ ಅಸಮತೋಲನ ಹೆಚ್ಚಿದೆ. ಇಂಥ ಸಂದರ್ಭದಲ್ಲಿ ಸಹಕಾರ ಸಂಘಗಳು ರೈತರಿಗೆ ಬಹಳಷ್ಟು ನೆರವು ಒದಗಿಸುತ್ತಿವೆ. ನೀರಾವರಿ ಪ್ರದೇಶಗಳ ರೈತರು ವಾಣಿಜ್ಯ ಬೆಳೆ ಬೆಳೆದು ಸದೃಢರಾಗುತ್ತಿದ್ದು, ಅವರು ಆರ್ಥಿಕ ಸ್ವಾವಲಂಬಿಗಳಾಗಬೇಕು ಎಂದು ಅವರು ಹೇಳಿದರು.

12 ವರ್ಷಗಳಲ್ಲಿ ಕೇಂದ್ರ ಸರಕಾರ ರೂ. 10 ಲಕ್ಷ ಕೋ. ಉದ್ಯಮಿಗಳ ಸಾಲ ಮನ್ನಾ ಮಾಡಿದೆ ಎಂದು ಬಿಜೆಪಿಯ ಸುಬ್ರಮಣ್ಯಸ್ವಾಮಿ ಹೇಳಿದ್ದಾರೆ. ಆದರೆ ರೈತರ ಕೇವಲ ರೂ. 2 ಲಕ್ಷ ಕೋ. ಸಾಲ ಮನ್ನಾ ಮಾಡುತ್ತಿಲ್ಲ. ಮನಮೋಹನ್ ಸಿಂಗ್ ಅವರೊಬ್ಬರೇ ಈ ದೇಶದಲ್ಲಿ ಸಾಲ ಮನ್ನಾ ಮಾಡಿದ್ದರು. ಇಲ್ಲಿ ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ಮಾಡಿದ್ದರಿಂದ ರೈತರಿಗೆ ಒಳಿತಾಗಿದೆ. ಈ ಭಾಗದ ಅಸ್ಮಿತೆಯಾದ ಈ ಕಾರ್ಖಾನೆ ಉಳಿಸಬೇಕು. ಕಷ್ಟದಲ್ಲಿರುವ ಇದನ್ನು ನಾನು ಮತ್ತು ಶಾಸಕ ಶಿವಾನಂದ ಪಾಟೀಲ, ಸಚಿವ ಲಕ್ಷ್ಮಣ ಸವದಿ ಅವರೆಲ್ಲ ಸೇರಿ ಉಳಿಸಿಕೊಳ್ಳುತ್ತೇವೆ. ಮುಳುಗಡೆ ರೈತರಿಗೆ ಮೊದಲು ರೂ. 30 ಸಾವಿರ ಕೋ. ಅದು ಈಗ ರೂ. 60 ಸಾವಿರ ಕೋ. ಗೆ ಹೆಚ್ಚಿದೆ. 70 ಸಾವಿರ ಎಕರೆ ಭೂಮಿ ಮುಳುಗಡೆಯಾಗಿದ್ದು, 20 ಹಳ್ಳಿಗಳು ಸ್ಥಳಾಂತರವಾಗಬೇಕಿದೆ ಎಂದು ಅವರು.

ಇಲ್ಲಿ ಸಹಕಾರಿ ಸಂಘದ ಭವ್ಯ ಕಟ್ಟಡ ನಿರ್ಮಾಣವಾಗಿರುವುದು ಸಂತೋಷವಾಗಿದೆ. ಸಾಲ ತೆಗೆದುಕೊಂಡವರು ಪ್ರಾಮಾಣಿಕವಾಗಿರಬೇಕು. ಶಿವಾನಂದ ಪಾಟೀಲರು ದಕ್ಷತೆಯಿಂದ ಡಿಸಿಸಿ ಬ್ಯಾಂಕ್ ಮುನ್ನೆಡೆಸಿ ಜಿಲ್ಲೆಯಲ್ಲಿ ತೊಂಬತ್ತರ ದಶಕದಿಂದಲೂ ಸಹಕಾರಿ ಕ್ಷೇತ್ರ ಬಲಪಡಿಸುತ್ತಿದ್ದಾರೆ ಎಂದು ಅವರು ಹೇಳಿದರು

ಮಾಜಿ ಸಚಿವ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಹಾಗೂ ಶಾಸಕ ಶಿವಾನಂದ ಎಸ್. ಪಾಟೀಲ ಮಾತನಾಡಿ, ಸಹಕಾರಿ ಚಳವಳಿ ಈ ದೇಶಕ್ಕೆ ಸಂಜೀವಿನಿ. ಇದು ಜಾತ್ಯಾತೀತ, ಪಕ್ಷಾತೀತ. ಕಡಿಗನಾಳ ಸಿದ್ಧನಗೌಡ ಧಾರವಾಡದಲ್ಲಿ ಸಹಕಾರಿ ಬಲ ತುಂಬಿದರೆ, ಅದು ಈ ಭಾಗದ ಬಿ. ಟಿ. ಪಾಟೀಲ ಅವರಿಂದ ಜಿಲ್ಲೆಯಲ್ಲಿ ಬೆಳೆದು ನಿಂತಿದೆ. ಒಟ್ಟು 272ರ ಸಂಘಗಳ ಪೈಕಿ ಇನ್ನು ಕೇವಲ 20 ಸಂಘಗಳ ಕಟ್ಟಡವಾದರೆ ಶೇ. 100 ರಷ್ಟು ಕಟ್ಟಡ ಹೊಂದಿದಂತಾಗುತ್ತದೆ. ಜಿಲ್ಲೆಯಲ್ಲಿ ಪ್ರತಿ ರೈತರಿಗೆ ರು. 80 ಸಾವಿರ ನೀಡಲಾಗುತ್ತಿದ್ದು, ಇದು ರಾಜ್ಯದಲ್ಲಿಯೇ ಅತೀ ಹೆಚ್ಚು. ಡಿಸಿಸಿ ಬ್ಯಾಂಕು ಇಂದು ರೂ. 6000 ಕೋ. ವ್ಯವಹಾರ ನಡೆಸುತ್ತಿದೆ. ಇದು ದಾಖಲೆಯಾಗಿದೆ. ಕೇಂದ್ರ ಸರಕಾರ ರೈತರ ಪರವಿಲ್ಲ, ಅದರ ನೀತಿಗಳಿಂದ ನಬಾರ್ಡ್ ಕೂಡ ಸಾಲ ನೀಡದ ಸ್ಥಿತಿ ಎದುರಾಗಿದೆ ಎಂದು ಹೇಳಿದರು.

ಟಕ್ಕಳಕಿ ಗ್ರಾಮದಲ್ಲಿ ಕುಡಿಯಲೂ ನೀರು ಸಿಗುತ್ತಿರಲಿಲ್ಲ ಆದರೆ ಅಲ್ಲಿನ ಹೆಣ್ಣುಮಕ್ಕಳು ದಿನಕ್ಕೆ 3000 ಲೀಟರ್ ಸಾವಿರ ಹಾಲು ಉತ್ಪಾದಿಸಿ ಸಹಕಾರಿ ರಂಗಕ್ಕೆ ಕೊಟ್ಟು ಸಬಲರಾಗಿದ್ದಾರೆ. ಹೊಲದಲ್ಲಿ ಮನೆ ಕಟ್ಟಿದರೆ ಅತ್ಯಂತ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಬಸವನ ಬಾಗೇವಾಡಿಯ ವಿರಕ್ತ ಮಠದ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ಸಚಿವ ಎಂ. ಬಿ. ಪಾಟೀಲ ಮತ್ತು ಮಾಜಿ ಸಚಿವ ಶಿವಾನಂದ ಎಸ್. ಪಾಟೀಲ ಅವರು ಜಿಲ್ಲೆಯ ಅಭಿವೃದ್ಧಿ ಪಥದ ಜೋಡೆತ್ತುಗಳು. ಒಬ್ಬರು ನೀರಾವರಿ, ಇನ್ನೊಬ್ಬರು ಸಹಕಾರಿ. ಒಬ್ಬರು ನೀರು ಕೊಟ್ಟು ರೈತರನ್ನು ಶ್ರೀಮಂತಗೊಳಿಸಿದ್ದರೆ, ಇನ್ನೊಬ್ಬರು ಸಹಾಕಾರಿ ರಂಗದಲ್ಲಿ ರೈತರನ್ನು ತೊಡಗಿಸಿ ಆರ್ಥಿಕ ಅಡಿಪಾಯ ಹಾಕಿದ್ದಾರೆ. ಇವರಿಬ್ಬರಿಂದ ಮುಂದೆಯೂ ಜಿಲ್ಲೆ ಇನ್ನಷ್ಟು ಪ್ರಗತಿ ಸಾಧಿಸಿ ರಾಜ್ಯದಲ್ಲಿಯೇ ಮಾದರಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರದ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ರಾಮನಗೌಡ ಪಾಟೀಲ ಪ್ರಾಸ್ತಾವಿಕ ಮಾತನಾಡಿದರು. ಎಂ. ಡಿ. ಪಡಸಲಗಿ ಸ್ವಾಗತಿಸಿದರು. ಬಬಲಾದಿಯ ಸದಾಶಿವಯ್ಯ ಶ್ರೀ, ಕಣಬೂರಿನ ರಾಚಯ್ಯ ಪೂಜಾರಿ ಸಾನಿಧ್ಯ ವಹಿಸಿದ್ದರು. ಸಹಕಾರಿ ಸಂಘಗಳ ಉಪನಿಬಂಧಕಿ ಎಸ್. ಕೆ. ಭಾಗ್ಯಶ್ರೀ, ಜಿಲ್ಲಾ ಪ್ರಬಂಧಕ ವಿಕಾಸ ರಾಠೋಡ, ಡಿಸಿಸಿ ಸಿಇಒ ಎಸ್. ಎ. ಢವಳಗಿ, ಸಹಾಯಕ ನಿಬಂಧಕ ಚೇತನ ಭಾವಿಕಟ್ಟಿ, ತರಬೇತಿ ಸಂಯೋಜಕ ಆರ್. ಎಂ. ಬಣಗಾರ ಮುಂತಾದವರು ಉಪಸ್ಥಿತರಿದ್ದರು.

# ಕೇಂದ್ರೀಯ ವಿದ್ಯಾಲಯದಲ್ಲಿ ಸ್ವಾತಂತ್ರ್ಯೋತ್ಸವ ಸಂಭ್ರಮ

■ ಉದಯರಶ್ಮಿ ದಿನಪತ್ರಿಕೆ




ಅಥಣಿ: ಶಿನಾಳ ಅಥಣಿ ಕೇಂದ್ರೀಯ ವಿದ್ಯಾಲಯದಲ್ಲಿ 80ನೇ ಸ್ವಾತಂತ್ರ್ಯೋತ್ಸವ ಶನಿವಾರ ಶಿಸ್ತು ಮತ್ತು ಸಂಯಮ ಹಾಗೂ ದೇಶ ಭಕ್ತಿಯಿಂದ ನೆರವೇರಿಸಲಾಯಿತು.

ಈ ವೇಳೆ ವಿದ್ಯಾಲಯದ ಪ್ರಭಾರಿ ಪ್ರಾಚಾರ್ಯ ಬಸವರಾಜ ಕುಂಚನೂರ ಅವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ ಸ್ವಾತಂತ್ರ್ಯೋತ್ಸವವು ಕೇವಲ ಆಚರಣೆಯ ದಿನವಲ್ಲ ದೇಶಭಕ್ತಿ, ಶಿಸ್ತು, ಜವಾಬ್ದಾರಿ, ಏಕತೆ ಹಾಗೂ ರಾಷ್ಟ್ರೀಯ ಕರ್ತವ್ಯದ ಮೌಲ್ಯಗಳನ್ನು ನೆನಪಿಸುವ ದಿನವಾಗಿದೆ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗದಿಂದ ನಮಗೆ ದೊರೆತ

ಸ್ವಾತಂತ್ರ್ಯವನ್ನು ಯುವ ಜನರು ಜವಾಬ್ದಾ–ರಿಯುತ ನಾಗರಿಕರಾಗಿ ಉಳಿಸಿ, ಬಲಿಷ್ಠ ಭಾರತದ ನಿರ್ಮಾಣದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಇನ್ನು ವಿವಿಧ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದ್ದು ವಿದ್ಯಾರ್ಥಿಗಳು ದೇಶಭಕ್ತಿ ಗೀತೆ ಹಾಡು ಕನ್ನಡ, ಹಿಂದಿ ಹಾಗೂ ಇಂಗ್ಲಿಷ್ ಭಾಷೆಗಳಲ್ಲಿ ಸ್ವಾತಂತ್ರ್ಯೋತ್ಸವದ ಮಹತ್ವ ಕುರಿತು ಭಾಷಣಗಳು ನಡೆದವು. ವಿದ್ಯಾರ್ಥಿಗಳ ಸಮೂಹ ಗೀತೆ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತ್ತು ಹಾಗೂ

ಬಾಲವಾಟಿಕಾ ವಿದ್ಯಾರ್ಥಿಗಳ ಉತ್ಸಾಹಭ–ರಿತ ಸಮೂಹ ನೃತ್ಯ ಮತ್ತು ಪ್ರಾಥಮಿಕ ವಿಭಾಗದ ವಿದ್ಯಾರ್ಥಿಗಳು ಪ್ರದರ್ಶಿಸಿದ ಎರಡು ಸಮೂಹ ನೃತ್ಯಗಳು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದ್ದು ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿದ್ದ ಸ್ವಾತಂತ್ರ್ಯ ಹೋರಾಟಗಾರರ ಪಾತ್ರಾಭಿನಯದಲ್ಲಿ 8 ವಿದ್ಯಾರ್ಥಿಗಳು ಮಹಾತ್ಮಾ ಗಾಂಧಿ, ಡಾ. ಬಿ,ಆರ್, ಅಂಬೇಡ್ಕರ್ ಭಗತ್ ಸಿಂಗ್ ಸೇರಿದಂತೆ ವಿವಿಧ ಮಹನೀಯರ ವೇಷ ಧರಿಸಿ ಅವರ ತ್ಯಾಗದ ಸಂದೇಶ ನೀಡಿದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರಾದ ಕುಂಬಾರ ಸರ್, ಪ್ರವೀಣ ಸಿಂದೆ,ವಿಕಾಸ ಸಿಂಗ್, ಬಿ ಆರ್ ಕಾಂಬಳೆ, ಜಗದೀಶ ಪಾಟೀಲ, ಕವಿತಾ ಕಾಂಬಳೆ ಲಕ್ಷ್ಮಿ ನಾವಿ, ತಿರುಮಲಾ ಯರಡೋಣಿ, ವಾಣಿಶ್ರೀ ಸುವರ್ಣ, ರಾಜಶ್ರೀ ವಸ್ತ್ರದ, ಜಯಶ್ರೀ ಅವಟಿ, ಸೇರಿದಂತೆ ವಿದ್ಯಾಲಯದ ಸಿಬ್ಬಂದಿ ವರ್ಗ ವಿದ್ಯಾರ್ಥಿಗಳು ಹಾಗೂ ಪಾಲಕರು ಭಾಗಿಯಾಗಿದ್ದರು

# ಸ್ವಾತಂತ್ರ್ಯ ಹೋರಾಟದಲ್ಲಿ ರಂಗಭೂಮಿ ಕಲಾವಿದರ ಪಾತ್ರ ಅಪಾರ

## ದೇಶಪ್ರೇಮ & ಜನಜಾಗೃತಿ ಮೂಡಿಸಿದ ರಂಗಕರ್ಮಿಗಳು । ಹಿರಿಯ ಕಲಾವಿದ ಸಿದ್ರಾಮ್ ತತ್ರಾಣಿ ಅಭಿಮತ

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ (ಜಮಖಂಡಿ): ಭಾರತದ ಸ್ವಾತಂತ್ರ್ಯ ಚಳುವಳಿಯ ಸಂದರ್ಭದಲ್ಲಿ ಕರ್ನಾಟಕದ ರಂಗಭೂಮಿ ಹಾಗೂ ನಾಟಕ ಕಲಾವಿದರು ಜನರಲ್ಲಿ ದೇಶಪ್ರೇಮ, ರಾಷ್ಟ್ರಾಭಿಮಾನ ಮತ್ತು ಸಾಮಾಜಿಕ ಜಾಗೃತಿ ಮೂಡಿಸುವಲ್ಲಿ ಮಹತ್ತರ ಪಾತ್ರವಹಿಸಿದ್ದರು ಎಂದು ಹಿರಿಯ ಕಲಾವಿದ ಸಿದ್ರಾಮ್ ತತ್ರಾಣಿ ಹೇಳಿದರು.

ನಗರದ ಬಸವೇಶ್ವರ ಸರ್ಕಲ್ ಸಮೀಪದ ವೀರುವ ವಿಶ್ವಜ್ಯೋತಿ ಪಂಚಾಕ್ಷರ ನಾಟ್ಯ ಸಂಘದ ಆವರಣದಲ್ಲಿ 80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯ ಚಳುವಳಿಯಲ್ಲಿ ನೇರವಾಗಿ ಧುಮುಕಿದವರಲ್ಲಿ ವೃತ್ತಿ ರಂಗಭೂಮಿಯ ಅನೇಕ ಕಲಾವಿದರು ಇದ್ದರು. ಅಂದಿನ ಸಂದರ್ಭದಲ್ಲಿ ನಾಟಕಗಳು ಕೇವಲ ಮನರಂಜನೆಯ ಮಾಧ್ಯಮವಾಗಿರದೆ, ಜನರಲ್ಲಿ ರಾಷ್ಟ್ರೀಯ ಪ್ರಜ್ಞೆ ಮೂಡಿಸುವ ಹಾಗೂ ಬ್ರಿಟಿಷರ ವಿರುದ್ಧ ಹೋರಾಟದ ಕಿಚ್ಚು ಹಚ್ಚುವ ಶಕ್ತಿಶಾಲಿ ಮಾಧ್ಯಮವಾಗಿದ್ದವು ಎಂದು ಅವರು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ನಾಟಕದ ಸಂಗೀತ ನಿರ್ದೇಶಕ ಬಸವಲಿಂಗಪ್ಪ ಕೊಡ್ಲಿ ಮಾತನಾಡಿ, ಸ್ವಾತಂತ್ರ್ಯ ಹೋರಾಟವು ಕೇವಲ ರಾಜಕೀಯ ಹೋರಾಟಕ್ಕೆ ಸೀಮಿತವಾಗಿರಲಿಲ್ಲ. ರಂಗಭೂಮಿ, ನಾಟಕ, ಸಂಗೀತ ಸೇರಿದಂತೆ ವಿವಿಧ ಸಾಂಸ್ಕೃತಿ–ಕ ಹಾಗೂ ಕಲಾ ಮಾಧ್ಯಮಗಳ ಮೂಲಕವೂ ಬ್ರಿಟಿಷರ ವಿರುದ್ಧ ಜನಜಾಗೃತಿ ಮೂಡಿಸಲಾಗಿತ್ತು. ಕಲಾವಿದರು ತಮ್ಮ ಕಲೆ ಮತ್ತು ಪ್ರತಿಭೆಯನ್ನು ದೇಶದ ಸ್ವಾತಂತ್ರ್ಯಕ್ಕಾಗಿ ಸಮರ್ಪಿಸಿಕೊಂಡಿದ್ದರು ಎಂದು ತಿಳಿಸಿದರು.

ಇಂದಿನ ಪೀಳಿಗೆ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನ ಹಾಗೂ ಕಲಾವಿದರು ವಹಿಸಿದ ಪಾತ್ರವನ್ನು ಅರಿತುಕೊಂಡು ದೇಶದ ಏಕತೆ, ಸಂವಿಧಾನದ ಮೌಲ್ಯಗಳು ಮತ್ತು ರಾಷ್ಟ್ರೀಯ ಭಾವನೆಗಳನ್ನು ಬೆಳೆಸಿಕೊಳ್ಳಬೇಕು. ರಂಗಭೂಮಿಯಂತಹ ಜನಪರ ಕಲಾ ಮಾಧ್ಯಮಗಳ ಮೂಲಕ ಸಮಾಜದಲ್ಲಿ ಉತ್ತಮ ಸಂದೇಶಗಳನ್ನು ಸಾರುವ ಕಾರ್ಯ ಮುಂದುವರಿಯಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜೇವರ್ಗಿ ನಾಟಕ ಕಂಪನಿಯ ಕಲಾವಿದರಾದ ರಾಘವೇಂದ್ರ ಮುದೋಳ, ಸಂಘದ ಒಡತಿ ಸುಜಾತಾ ಗುಬ್ಬಿ, ಪ್ರಭು ಹಿರೇಮಠ್, ಸಿದ್ದು ಹಿರೇಮಠ್, ಪ್ರಿಯಾ ಅಕ್ಕಲಕೋಟ, ಧನ್‌ರಾಜ್ ಬುಗಡೆಕರ, ಸಿದ್ದಣ್ಣ ಬಾಪ್ರಿ, ಕಮತಗಿ ಅವಿನಾಶ್ ಅಕ್ಕಲಕೋಟ, ಪುಟ್ಟು ಕೊಡ್ಲಿ, ಪೃಥ್ವಿ ಬಾದಾಮಿ, ಪ್ರೇಮ ಮೂಡಲಗಿ, ರವಿ ಬಿಸರಹಳ್ಳಿ ಸೇರಿದಂತೆ ವಿವಿಧ ಕಲಾವಿದರು ಉಪಸ್ಥಿತರಿದ್ದರು.

ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ರಂಗಭೂಮಿ ಕಲಾವಿದರು ಒಂದೆಡೆ ಸೇರಿ ರಾಷ್ಟ್ರಧ್ವಜಕ್ಕೆ ಗೌರವ ಸಲ್ಲಿಸುವ ಮೂಲಕ ಕಲೆಯ ಜೊತೆಗೆ ದೇಶಪ್ರೇಮದ ಸಂದೇಶವನ್ನು ಸಾರಿದರು.

# ಜೆಸ್ಕಾಂ ಅಭಿವೃದ್ಧಿಗೆ ಅಧಿಕಾರಿಗಳ ಬೆಂಬಲವೇ ಬಲ: ಪ್ರವೀಣ್ ಪಾಟೀಲ್ ಹರವಾಳ

ಕಲಬುರಗಿ: ನಮ್ಮ ಶ್ರಮಕ್ಕೆ ಅಧಿಕಾರಿಗಳು ಇನ್ನಷ್ಟು ಹೆಚ್ಚಿನ ಬೆಂಬಲ ನೀಡಿದರೆ, ನಮ್ಮ ಜೆಸ್ಕಾಂ ಅನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯಲು ಸಹಕಾರಿಯಾಗುತ್ತದೆ ಎಂದು ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ ಅವರು ಹೇಳಿದರು.

ಗುಲ್ಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಗಮದ ಕಚೇ–ರಿಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, “ನಾವು ಇಂದು 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ. ಆದರೂ, ಸಮಾನತೆ, ಮಾನವೀಯತೆ ಹಾಗೂ ಅನಿಷ್ಠ ಪದ್ಧತಿಗಳಿಂದ ಇನ್ನೂ ಸಂಪೂರ್ಣ ಸ್ವಾತಂತ್ರ್ಯ ಪಡೆಯಬೇಕಾಗಿದೆ. ಯಾವುದೇ ಒಂದು ದೇಶದ ಉನ್ನತೀಕರಣಕ್ಕೆ ಸ್ವಾತಂತ್ರ್ಯ ಬಹುಮುಖ್ಯ. ದೇಶದ ಅಭಿವೃದ್ಧಿ ಹಾಗೂ ಪರಿಸರ ಸಂರಕ್ಷಣೆ ಕೇವಲ ಸರ್ಕಾರದ ಜವಾಬ್ದಾರಿಯಲ್ಲ; ಅದು ನಮ್ಮೆಲ್ಲರ ಕರ್ತವ್ಯವಾಗಿದೆ” ಎಂದು ಹೇಳಿದರು.

“ನಮಗೆ ಸ್ವಾತಂತ್ರ್ಯವನ್ನು ಒದಗಿಸಿದ ಹೋರಾಟಗಾರರ ತ್ಯಾಗ ಮತ್ತು ಬಲಿದಾನಕ್ಕೆ ಚಿರಋಣಿಯಾಗಿರಲು, ನಾವು ನಮ್ಮ ಕರ್ತವ್ಯವನ್ನು ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ನಿರ್ವಹಿಸಬೇಕು. ಜೆಸ್ಕಾಂನ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಒಂದು ತಂಡವಾಗಿ ಕಾರ್ಯನಿರ್ವಹಿಸಿದರೆ ಯಶಸ್ಸು ಸಾಧಿಸಲು ಸಾಧ್ಯ. ಸಾರ್ವಜನಿಕರ ಸೇವೆಯಲ್ಲಿ ಪ್ರಾಮಾಣಿಕತೆ ಮತ್ತು ನಿಷ್ಠೆಯಿಂದ ಕಾರ್ಯನಿರ್ವಹಿಸೋಣ,” ಎಂದರು.

# ಅರಳದಿನ್ನಿ ಸರಕಾರಿ ಶಾಲೆಯಲ್ಲಿ ಸಂಭ್ರಮದ ಸ್ವಾತಂತ್ರ್ಯೋತ್ಸವ



■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಭಾರತ ದೇಶದ 80ನೇ ಸ್ವಾತಂತ್ರ್ಯೋತ್ಸವವನ್ನು ಸಮೀಪದ ಅರಳದಿನ್ನಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮದ ಪ್ರಾರಂಭದಲ್ಲಿ ಧರ್ಮದ ಮಠದ ಧರ್ಮಾಧಿಕಾರಿಗಳಾದ ಶ್ರೀ ಚಂದ್ರಶೇಖರ್ ಧರ್ಮರ ಅವರು ಪೂಜಾ ಕಾರ್ಯಕ್ರಮವನ್ನು ನೆರವೇರಿಸಿದರು. ನಂತರ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಬಸವರಾಜ್ ಹೆರಕಲ್ ಅವರು ರಾಷ್ಟ್ರಧ್ವಜವನ್ನು ಹಾರಿಸಿ, ರಾಷ್ಟ್ರಗೀತೆ ಹಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ದೇಶಭಕ್ತಿ ಕಾರ್ಯಕ್ರಮಗಳು

ಧ್ವಜಾರೋಹಣದ ನಂತರ ವಿದ್ಯಾರ್ಥಿಗಳಿಂದ ದೇಶಭಕ್ತಿ ಗೀತೆಗಳು, ಭಾಷಣ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಶಿಕ್ಷಕರು ಸ್ವಾತಂತ್ರ್ಯ ಹೋರಾಟದ ಮಹತ್ವ ಮತ್ತು ದೇಶಭಕ್ತಿಯ ಕುರಿತು ಮಕ್ಕಳಿಗೆ ತಿಳುವಳಿಕೆ ನೀಡಿದರು.

ಗಣ್ಯರ ಉಪಸ್ಥಿತಿ

ಈ ಕಾರ್ಯಕ್ರಮದಲ್ಲಿ ಗ್ರಾಮದ ಗಣ್ಯರಾದ ರಾಯನಗೌಡ ಪಾಟೀಲ, ಸಿದ್ದನಗೌಡ ಪಾಟೀಲ, ಶಾಂತಪ್ಪ ಹೆರಕಲ್, ಬೊಮ್ಮಯ್ಯ ಹಿರೇಮಠ, ಕರಿಯಪ್ಪ ಭಾವಿಕಟ್ಟಿ, ಮಲ್ಲನಗೌಡ ಬಿರಾದಾರ, ಸುಬಾಸ ಚೋಪಡೆ, ಹಣಮಂತ ಕೊಳ್ಳಾರ, ಯಲಗೂರದಪ್ಪ ಟುಬಾಕಿ, ಹಣಮಂತ ಮಾದರ ಸೇರಿದಂತೆ ಗ್ರಾಮದ ಗುರು–ಹಿರಿಯರು ಉಪಸ್ಥಿತರಿದ್ದರು.

ಶಾಲೆಯ ಮುಖ್ಯ ಶಿಕ್ಷಕರಾದ ಎನ್ ಆಯ್ ಶೇಖ್, ನಿಡಗುಂದಿ ತಾಲೂಕಿನ ಶಿಕ್ಷಕರ ಸಂಘದ ಅಧ್ಯಕ್ಷರಾದ ಸಲೀಮ ದಡೇದ, ಶಿಕ್ಷಕರಾದ ಸುರೇಶ ವಾಲಿಕಾರ, ಸಲೀಮ ಮುಲ್ಲಾ, ಎಸ್ ಕೆ ಗೊಳಸಂಗಿ, ಎಚ್ ಆಯ್ ಮಾಲಧಾರ, ಅಡುಗೆ ಸಹಾಯಕರು ಮತ್ತು ಮುದ್ದು ಮಕ್ಕಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸಂಭ್ರಮಕ್ಕೆ ಮೆರುಗು ನೀಡಿದರು.

# 6 ಲಕ್ಷ ಹೆಕ್ಟೇರಗೆ ನೀರು: ಯುಕೆಪಿ ಹಂತ–3 ಸವಾಲು ಸ್ವೀಕಾರ

## ಕೆಬಿಜೆಎನ್‌ಎಲ್ ಎಂ.ಡಿ ಕೃಷ್ಣಮೂರ್ತಿ ಕುಲಕರ್ಣಿ ಹೇಳಿಕೆ



■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಸ್ವಾತಂತ್ರ್ಯದ ನಂತರ ಪ್ರಗತಿಯ ಹಾದಿಯಲ್ಲಿ ಸಾಗಿದ ಭಾರತದ ಅಭಿವೃದ್ಧಿಗೆ ಕೃಷ್ಣಾ ಮೇಲ್ದಂಡೆ ಯೋಜನೆ (ಯುಕೆಪಿ) ಕೊಡುಗೆಯೂ ಸೇರಿದೆ ಎಂದು ಕೃಷ್ಣಾ ಭಾಗ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಕೃಷ್ಣಮೂರ್ತಿ ಕುಲಕರ್ಣಿ ಹೇಳಿದರು.

ಇಲ್ಲಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ಕೃಷ್ಣಾ ಭಾಗ್ಯ ಜಲ ನಿಗಮದಿಂದ ಜಂಟಿಯಾಗಿ ಹಮ್ಮಿಕೊಂಡಿದ್ದ 79ನೇ ಸ್ವಾತಂತ್ರ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

"ಯುಕೆಪಿ ಈ ಭಾಗದ ಜೀವನಾಡಿ"

ಯುಕೆಪಿ ಈ ಭಾಗದ ಲಕ್ಷಾಂತರ ಜನರ ಜೀವನಾಡಿಯಾಗಿದೆ. ಈಗಾಗಲೇ ಯುಕೆಪಿ ಹಂತ–1 ಮತ್ತು ಹಂತ–2 ನ್ನು ಯಶಸ್ವಿಯಾಗಿ ನಿರ್ವಹಿಸಿ 6 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರು ಒದಗಿಸಲಾಗಿದೆ. ಈಗ ಹಂತ–3 ರ ಕಾಮಗಾರಿಯನ್ನು ಯಶಸ್ವಿಯಾಗಿ ನಿರ್ವಹಿಸುವ ಸವಾಲು ನಮ್ಮ ಮುಂದಿದೆ ಎಂದು ತಿಳಿಸಿದರು.

ಭಾರತ ಕಲೆ, ಸಂಸ್ಕೃತಿ, ಜ್ಞಾನ, ವಿಜ್ಞಾನ, ತಂತ್ರಜ್ಞಾನ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲೂ ಜಗತ್ತು ಭಾರತವನ್ನು ಎತ್ತರದ ಸ್ಥಾನದಲ್ಲಿ ನೋಡುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಭಾಗಿ:

ನೌಕರರ ಸಂಘದ ಅಧ್ಯಕ್ಷ ಸದಾಶಿವ ದಳವಾಯಿ, ಮುಖ್ಯ ಎಂಜಿನಿಯರ್ ಡಿ.ಬಸವರಾಜ, ಬಿ.ಎಸ್. ಪಾಟೀಲ, ಗೋವಿಂದ ರಾಠೋಡ, ಐ.ಎಲ್. ಕಳಸಾ, ಅಮರೇಗೌಡ, ಕೆ.ಜಯಣ್ಣ, ರವಿ ಚಂದ್ರಗಿರಿಯವರ, ಸಹಾಯಕ ಕಮಾಂಡೆಂಟ್ ಈರಪ್ಪ ವಾಲಿ, ಶಿವಲಿಂಗ ಕುರೆನ್ನವರ, ಅಹ್ಮದ್ ಸಂಗಾಪುರ, ಐ.ಎಫ್. ಇಂಡಿಕರ, ನಿಸ್ಸಾರ ಪಿಂಜಾರ್, ಸುರೇಶ ಹುರಕಡ್ಡಿ, ಪ್ರಾಂಶುಪಾಲರಾದ ಪಿ.ಎ. ಹೇಮಗಿರಿಮಠ, ಎಚ್.ಎನ್. ಕೆಲೂರ, ಜಿ.ಎಂ. ಕೋಟ್ಯಾಳ, ಎಸ್.ಐ. ಗಿಡ್ಡಪ್ಪಗೋಳ, ಬಿ.ಎಸ್. ಯರವಿನತೆಲಿಮಠ, ಎಂ.ಎಸ್. ಭಂಡಾರಿ, ಕೆ.ಎನ್. ಹಿರೇಮಠ, ಮಹೇಶ ಗಾಳಪ್ಪಗೋಳ, ವೈ.ಎಂ. ಪಾತ್ರೋಟ ಇದ್ದರು.

ಕಾರ್ಯಕ್ರಮದಲ್ಲಿ ಮಕ್ಕಳಿಂದ ಆಕರ್ಷಕ ಪಥಸಂಚಲನ ಮತ್ತು ಡಿಸ್‌ಪ್ಲೇ ನೃತ್ಯ ಪ್ರದರ್ಶನ ನಡೆಯಿತು.

ಶಾಲೆಯಲ್ಲಿ ಧ್ವಜಾರೋಹಣ

ಇಲ್ಲಿಯ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ನಿಸ್ಸಾರ್ ಪಿಂಜಾರ್ ಧ್ವಜಾರೋಹಣ ನೆರವೇರಿಸಿದರು. ಸಿಆರ್‌ಪಿ ಸುರೇಶ ಹುರಕಡ್ಲಿ, ಮುಖ್ಯ ಶಿಕ್ಷಕ ಬಿ.ಎಸ್. ಯರವಿನತೆಲಿಮಠ, ಗುರುಪೊಲೀಸ್ ಪಾಟೀಲ, ಪರಶುರಾಮ ಮಾದರ, ಪಿ.ಎಚ್. ನಾಯಕ, ಸುನಂದಾ ಹುರಕಡ್ಲಿ ಮತ್ತಿತರರು ಉಪಸ್ಥಿತರಿದ್ದರು.

# ಸ್ವಾತಂತ್ರ್ಯದ ಮೌಲ್ಯ ಉಳಿಸುವ ಹೊಣೆ ಪ್ರತಿ ನಾಗರಿಕನದ್ದು

■ ಉದಯರಶ್ಮಿ ದಿನಪತ್ರಿಕೆ



**ಮುದ್ದೇಬಿಹಾಳ ನ್ಯಾಯಾಲಯದಲ್ಲಿ ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆ। ನ್ಯಾ. ಕೌಶಿಕ್ ಅಭಿಮತ**

ಮುದ್ದೇಬಿಹಾಳ: ಸ್ವಾತಂತ್ರ್ಯದ ನಿಜವಾದ ಅರ್ಥವನ್ನು ಅರಿತು, ದೇಶದ ಕಾನೂನು ಮತ್ತು ಸಂವಿಧಾನದ ಆಶಯಗಳನ್ನು ಗೌರವಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರೂ ಹಾಗೂ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಚಿನ್ ಕೌಶಿಕ್ ಹೇಳಿದರು.

ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ನಡೆದ 80ನೇ ಸ್ವಾತಂತ್ರೋತ್ಸವ ದಿನಾಚರಣೆಯಲ್ಲಿ ಧ್ವಜಾರೋಹಣ ನೆರವೇರಿಸಿ, ರಾಷ್ಟ್ರಧ್ವಜಕ್ಕೆ ಗೌರವ ಸಲ್ಲಿಸಿ ಅವರು ಮಾತನಾಡಿದರು.

ದೇಶಕ್ಕೆ ಸ್ವಾತಂತ್ರ್ಯ ದೊರೆತಿರುವುದು ಕೇವಲ ಸಂಭ್ರಮಿಸಲಿಕ್ಕಲ್ಲ. ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ತ್ಯಾಗ, ಬಲಿದಾನ ಮತ್ತು ದೇಶದ ಸಂವಿಧಾನ ನೀಡಿರುವ ಮೌಲ್ಯಗಳನ್ನು ನೆನಪಿಸಿಕೊಳ್ಳುವ ಜೊತೆಗೆ ಸ್ವಾತಂತ್ರ್ಯದ ಮೌಲ್ಯ ಉಳಿಸುವ ಹೊಣೆ ಪ್ರತಿಯೊಬ್ಬ ನಾಗರಿಕನಮೇಲಿದೆ ಎನ್ನುವದನ್ನು ಯಾರೊಬ್ಬರೂ ಮರೆಯಬಾರದು ಎಂದರು.

ಸಮಿತಿಯ ಸದಸ್ಯ ಕಾರ್ಯದರ್ಶಿಗಳೂ ಹಾಗೂ ಸಿವಿಲ್ ನ್ಯಾಯಾಧೀಶರಾದ ರಾಮಮೂರ್ತಿ ಎನ್ ಅವರು ಮಾತನಾಡಿ, ಪ್ರತಿಯೊಬ್ಬ ನಾಗರಿಕರೂ ತಮ್ಮ ವೃತ್ತಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸುವ ಮೂಲಕ ದೇಶದ ಅಭಿವೃದ್ಧಿಗೆ ಶ್ರಮಿಸಬೇಕು.

ವಿಶೇಷವಾಗಿ ನ್ಯಾಯಾಂಗ ವ್ಯವಸ್ಥೆ ದೇಶದ ವ್ಯವಸ್ಥೆಯಲ್ಲಿ ಅತ್ಯಂತ ಮಹತ್ವದ ಪಾತ್ರ ವಹಿಸುತ್ತಿದ್ದು, ನ್ಯಾಯಕ್ಕಾಗಿ ನ್ಯಾಯಾಲಯದ ಮೆಟ್ಟಿಲೇರುವ ನೊಂದ ಪಕ್ಷಗಾರರಿಗೆ ಕಾನೂನು ಅರಿತ ನ್ಯಾಯಾಧೀಶರು ಹಾಗೂ ನ್ಯಾಯವಾದಿಗಳು ಪೂರಕ ವಾತಾವರಣ ನಿರ್ಮಿಸಿ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಅದೇ ನಾವು ದೇಶಕ್ಕೆ ನೀಡಬಹುದಾದ ನೈಜ ಕೊಡುಗೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಬಸವ ಕಲ್ಯಾಣದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಚ್.ಆರ್.ಕುಲಕರ್ಣಿ ಅವರು ಮಾತನಾಡಿ, ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂಬ ಸಂವಿಧಾನದ ಆಶಯವನ್ನು ಪ್ರತಿಯೊಬ್ಬರೂ ಅರ್ಥಮಾಡಿಕೊಳ್ಳಬೇಕು. ನ್ಯಾಯ, ಸಮಾನತೆ, ಸ್ವಾತಂತ್ರ್ಯ ಮತ್ತು ಸಹೋದರತ್ವದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸ್ವಾತಂತ್ರ್ಯ ದಿನಾಚರಣೆಗೆ ನಿಜವಾದ ಅರ್ಥ ಬರುತ್ತದೆ ಎಂದರು.

ಧ್ವಜಾರೋಹಣಕ್ಕೂ ಮೊದಲು ಮಹಾತ್ಮಾ ಗಾಂಧಿ ಮತ್ತು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ ಗೌರವ ನಮನ ಸಲ್ಲಿಸಲಾಯಿತು. ಜ್ಞಾನ ಭಾರತಿ ವಿದ್ಯಾ ಮಂದಿರದ ಶಿಕ್ಷಕಿಂ–ಯರಾದ ರಚನಾ ಕುಲಕರ್ಣಿ ಮತ್ತು ದೀಪಿಕಾ ಪೂಜಾರಿ ವಂದೇ ಮಾತರಂ ಗೀತೆ ಪಠಿಸಿದರು. ಪಿಪಿ ವಿ.ಜಿ.ಮಾಮನಿ, ಎಪಿಪಿ ಬಸವರಾಜ ಆಹೇರಿ, ಅಪರ್ ಸರ್ಕಾರಿ ವಕೀಲರಾದ ಎಚ್.ಎಲ್.ಸರೂರ, ಸೇವಾ ಸಮಿತಿಯ ಆಡಳಿತ ಸಹಾಯಕ ಅರವಿಂದ ಕುಂಬಾರ, ದಲಾಯತ್ ಮಹಾಂತೇಶ ಹಚರೆಡ್ಡಿ ಸೇರಿದಂತೆ ನ್ಯಾಯಾಲಯದ ಸಿಬ್ಬಂದಿ, ನ್ಯಾಯವಾದಿಗಳು ಭಾಗಿಯಾಗಿದ್ದರು.

ನ್ಯಾಯವಾದಿಗಳ ಸಂಘದಿಂದ ಸ್ವಾತಂತ್ರೋತ್ಸವ

ಇಲ್ಲಿನ ನ್ಯಾಯವಾದಿಗಳ ಸಂಘದಿಂದ ನಡೆದ ಸ್ವಾತಂತ್ರೋತ್ಸವ ದಿನಾಚರಣೆಯಲ್ಲಿ ಸಂಘದ ಅಧ್ಯಕ್ಷ ಶಶಿಕಾಂತ ಮಾಲಗತ್ತಿ ಅವರು ಧ್ವಜಾರೋಹಣವನ್ನು ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಪ್ರಾಮಾಣಿಕತೆ, ಶಿಸ್ತು, ಪ್ರೀತಿ, ದೇಶದ ಐಕ್ಯತೆ, ಕರುಣೆ ಹಾಗೂ ದೇಶಪ್ರೇಮದಂತಹ ಮೌಲ್ಯಗಳನ್ನು ಪ್ರತಿಯೊಬ್ಬರೂ ತಮ್ಮ ವ್ಯಕ್ತಿತ್ವದಲ್ಲಿ ಮೈಗೂಡಿಸಿಕೊಂಡು ಜೀವನ ನಡೆಸಿದಾಗ ಮಾತ್ರ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರಿಗೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ ಎಂದರು.

ಹಿರಿಯ ನ್ಯಾಯವಾದಿಗಳಾದ ಎಂ.ಎಚ್.ಹಾಲಣ್ಣವರ ಅವರು ಮಾತನಾಡಿ, ನಮ್ಮ ದೇಶ ಸ್ವಾತಂತ್ರ್ಯ ಪಡೆದ ಮೇಲೆ ಏನು ಸಾಧನೆ ಮಾಡಿದ್ದೇವೆ ಎಂಬ ಬಗ್ಗೆ ಪ್ರತಿಯೊಬ್ಬರೂ ಆತ್ಮಾವಲೋಕನ ಮಾಡಿಕೊಳ್ಳಬೇಕಾಗದೆ. ಸಾಕಷ್ಟುಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದೇವೆ ಎಂದಾದರೂ ಪ್ರತೀ ಕ್ಷೇತ್ರದಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಕೆಲವು ಕುತಂತ್ರಿಗಳು ದೇಶವನ್ನು ಒಡೆಯುವ ಹುನ್ನಾರ ಮಾಡುತ್ತಿದ್ದಾರೆ. ಸಂವಿಧಾನವನ್ನು ಬದಲಾಯಿಸಬೇಕೆನ್ನುವ ಮನಸ್ಥಿತಿ ಹೊಂದಿದ್ದಾರೆ. ಹೀಗಾದಲ್ಲಿ ದೇಶದ ಐಕ್ಯತೆಯನ್ನು ಕಾಪಾಡುವಲ್ಲಿ ವಿಫಲರಾಗುತ್ತೇವೆ ಎಂದರು.

ಇದೇ ವೇಳೆ ಜಯಾ ಸಾಲಿಮಠ ವಕೀಲರು ಮಾತನಾಡಿದರು. ಸಂಘದ ಉಪಾಧ್ಯಕ್ಷರಾದ ಎಚ್.ಜಿ.ನಾಗೋಡ, ಪ್ರ.ಕಾರ್ಯದರ್ಶಿ ಪಿ.ಬಿ.ಗೌಡರ, ಹಿರಿಯ ವಕೀಲರಾದ ಜೆ.ಎ.ಚಿನಿವಾರ, ಎಂ.ಎ.ಮುದ್ದೇಬಿಹಾಳ, ಬಿ.ಆರ್.ನಾಡಗೌಡ, ಎಂ.ಎಚ್.ಕ್ವಾರಿ, ವಿ.ಜಿ.ಮದರಕಲ್ಲ, ಎಚ್.ವಾಯ್.ಪಾಟೀಲ, ವಿ.ಎಸ್.ಸಾಲಿಮಠ, ಎನ್.ಜಿ.ಕುಲಕರ್ಣಿ, ಎಸ್.ಆರ್.ಸಜ್ಜನ, ಎಸ್.ಎಂ.ಕಿಣಗಿ, ಎಂ.ಆರ್.ಪಾಟೀಲ ನ್ಯಾಯವಾದಿಗಳಾದ ಚೇತನ ಶಿವಶಿಂಪಿ, ಎಂ.ಬಿ.ಬಿರಾದಾರ, ಬಸಣ್ಣ ಮುಂದಿನಮನಿ, ಎನ್.ಐ.ಕೇಸಾಪೂರ, ರವಿ ನಾಲತವಾಡ, ಎನ್.ಎಸ್.ಪಾಟೀಲ, ಸಾಬಣ್ಣ ಚಳ್ಳಗಿ, ವಿರೇಶ ಹಿರೇಮಠ, ಸಂತೋಷ ನಾಯಕ, ರಾಜೇಶ್ವರಿ ಕೌಶಿಕ್, ಶ್ರೀದೇವಿ ರಾಜೂರ, ಹಸೀನಾ ಅನಂತಪೂರ, ರೇಣುಕಾ ಪಾಟೀಲ, ರಶ್ಮಿ ಕುಲಕರ್ಣಿ, ಪಿ.ಎ.ಹಿರೇಮಠ, ಎಸ್.ಆರ್.ಅಮರಣ್ಣವರ, ಬುಡ್ಡಾ ನಾಲತವಾಡ ಸೇರಿದಂತೆ ಮತ್ತಿತರರು ಭಾಗಿಯಾಗಿ ಸ್ವಾತಂತ್ರೋತ್ಸವ ದಿನವನ್ನು ಸಂಭ್ರಮಿಸಿದರು.

# ರಕ್ತದಾನ ಮತ್ತೊಂದು ಜೀವಕ್ಕೆ ಜೀವದಾನ: ಚವಲರ

■ ಉದಯರಶ್ಮಿ ದಿನಪತ್ರಿಕೆ



ತಿಕೋಟಾ: ರಕ್ತದಾನ ಮಾಡುವುದರಿಂದ ಮತ್ತೊಂದು ಜೀವಕ್ಕೆ ಜೀವದಾನ ಮಾಡಿದಂತಾಗುತ್ತದೆ. ಜೀವ ಉಳಿಸುವಲ್ಲಿ ರಕ್ತ ಅತ್ಯಮೂಲ್ಯವಾಗಿದ್ದು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಮಾಡುವ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಹಶೀಲ್ದಾರ್ ಸುರೇಶ ಚವಲರ ಹೇಳಿದರು.

ತಿಕೋಟಾ ಪಟ್ಟಣದ ವಾಡೆ ಮೈದಾನದಲ್ಲಿ 80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಯುವಕರಿಂದ ದೇಶ ಸದೃಢವಾಗುತ್ತದೆ. ಯುವಶಕ್ತಿ ಸಮಾಜದ ಅಭಿವೃದ್ಧಿಗೆ ಪ್ರಮುಖವಾದುದು. ರಕ್ತದಾನ ಮಾಡುವ ಮೂಲಕ ಯುವಕರು ಮಾನವೀಯ ಸೇವೆಯ ಜೊತೆಗೆ ಮತ್ತೊಂದು ಕುಟುಂಬದ ಬದುಕಿಗೆ ಆಸರೆಯಾಗಬಹುದು ಎಂದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ರಘು ನಡುವಿನಮನಿ ಅವರು ಸ್ವತಃ ರಕ್ತದಾನ ಮಾಡುವ ಮೂಲಕ ಶಿಬಿರದಲ್ಲಿ ಭಾಗವಹಿಸಿ, ಯುವಕರಿಗೆ ಮಾದರಿಯಾದರು. ಅವರ ಸೇವೆಯನ್ನು ಗಣ್ಯರು ಶ್ಲಾಘಿಸಿದರು.

ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಗುರುಪಾದ ದಾಸ್ಯಾಳ ಮಾತನಾಡಿ ಪಟ್ಟಣದಲ್ಲಿ ರೈತ ಸಂಘದ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ಹಮ್ಮಿಕೊಂಡಿರುವುದು ಸಂತಸದ ಸಂಗತಿ. ಇಂತಹ ಸಮಾಜಮುಖಿ ಕಾರ್ಯಕ್ರಮಗಳು ಮೇಲಿಂದ ಮೇಲೆ ನಡೆಯಬೇಕು. ರಕ್ತವು ಒಂದು ಜೀವವನ್ನು ಉಳಿಸುವ ಶಕ್ತಿ ಹೊಂದಿದೆ. ಆದ್ದರಿಂದ ರಕ್ತದಾನ ಶ್ರೇಷ್ಠ ದಾನವಾಗಿದ್ದು, ಯುವಕರು ವರ್ಷದಲ್ಲಿ ಕನಿಷ್ಠ ಒಂದೆರಡು ಬಾರಿ ರಕ್ತದಾನ ಮಾಡಲು ಮುಂದಾಗಬೇಕು ಎಂದು ಕರೆ ನೀಡಿದರು.

ಶಿಬಿರದಲ್ಲಿ ಅಲ್ ಅಮೀನ್ ಮೆಡಿಕಲ್ ಕಾಲೇಜಿನ ವೈದ್ಯಾಧಿಕಾರಿ ಡಾ. ಇಬ್ರಾಹಿಂ ನಾಗನೂರ ಅವರ ನೇತೃತ್ವದಲ್ಲಿ ಸಾರ್ವಜನಿಕರಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಲಾಯಿತು. ವಿವಿಧ ಆರೋಗ್ಯ ಸಮಸ್ಯೆಗಳ ಕುರಿತು ವೈದ್ಯರು ಸಲಹೆ ಹಾಗೂ ಮಾರ್ಗದರ್ಶನ ನೀಡಿದರು.

ಅದೇ ರೀತಿ ರಕ್ತನಿಧಿ ಕೇಂದ್ರ ವಿಜಯಪುರದ ನಾಗರಾಜ ಪೂಜಾರಿ ಹಾಗೂ ವಿನಾಯಕ ಹಿರೇಮಠ ಅವರ ಸಹಯೋಗದಲ್ಲಿ ರಕ್ತ ಸಂಗ್ರಹಣಾ ಕಾರ್ಯ ನಡೆಯಿತು. ಯುವಕರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ರಕ್ತದಾನ ಮಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಜೆ.ಎಂ.ಪಾಟೀಲ, ದೇವರಾಜ ಉಳ್ಳಾಗಡ್ಡಿ, ನೀರಾವರಿ ಇಲಾಖೆಯ ಅಧಿಕಾರಿ ಅಂಬಣ್ಣ ಹರಳಯ್ಯ, ರೈತ ಸಂಘದ ಮಹಿಳಾ ತಾಲ್ಲೂಕ ಅಧ್ಯಕ್ಷೆ ಸಂಗೀತಾ ರಾಠೋಡ, ಸುರೇಶ ಕೊಣ್ಣೂರ, ರವಿಕಿರಣ ಹೊಸೂರ, ಮೋಬೀನ ಅಪರಾದ, ಗಣೇಶ ದಳವಾಯಿ, ಸಂತೋಷ ತಾಳಿಕೋಟಿ, ಜಾವೀದ್ ಮುಜಾವರ, ಆರ್.ಬಿ. ದೇಸಾಯಿ, ಬಸಯ್ಯ ವಿಭೂತಿ, ಲೇಪು ಕೊಣ್ಣೂರ, ಚಂದು ತೋರವಿ, ರಾವತ ಕಂಭಾರ ಇದ್ದರು.

# ವಿಜಯಪುರದಲ್ಲಿ 19 ಕೋಟಿ ರೂ. ವೆಚ್ಚದ ಕಾಮಗಾರಿಗಳಿಗೆ ಚಾಲನೆ

■ ಉದಯರಶ್ಮಿ ದಿನಪತ್ರಿಕೆ



**ಮಳೆಗಾಲದಲ್ಲಿ ವಿಜಯಪುರ ನಗರದ ಪ್ರವಾಹ ಪರಿಸ್ಥಿತಿ ನಿವಾರಣೆಗೆ ಕ್ರಮ। ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ಭರವಸೆ**

ವಿಜಯಪುರ: ಮಳೆಗಾಲದಲ್ಲಿ ನಗರದ ವಿವಿಧ ಪ್ರದೇಶಗಳಲ್ಲಿ ಮಳೆ ನೀರು ನುಗ್ಗಿ ಪ್ರವಾಹ ಪರಿಸ್ಥಿತಿ ಉಂಟಾಗುವುದನ್ನು ತಪ್ಪಿಸುವ ಉದ್ದೇಶದಿಂದ ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ2ರಡಿ 19 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ್ದು, ಕಾಮಗಾರಿಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಿ, ಮಳೆಗಾಲದಲ್ಲಿ ಸಾರ್ವಜನಿಕರಿಗೆ ಹಾಗೂ ಮನೆಗಳಿಗೆ ಉಂಟಾಗುವ ತೊಂದರೆ ನಿವಾರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಬೃಹತ್ ಮತ್ತು ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಬಿ. ಪಾಟೀಲ ಅವರು ಹೇಳಿದರು.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ– 2ರಡಿ ಕೈಗೆತ್ತಿಕೊಳ್ಳಲಾದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ. ಬಿ. ಪಾಟೀಲ ಅವರು ಶನಿವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಈ ಯೋಜನೆಯಡಿ ಮಳೆನೀರು ಚರಂಡಿ, ಒಳಚರಂಡಿ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ವಿಶೇಷವಾಗಿ ನವಭಾಗ್ ಪ್ರದೇಶದಲ್ಲಿ ಮಳೆನೀರು ಚರಂಡಿ ಹಾಗೂ ನವಭಾಗ್–ಹಮೀದ ನಗರ ರಸ್ತೆಯಲ್ಲಿ ಮಳೆನೀರು ಚರಂಡಿ ಮತ್ತು ಯುಟಿಲಿಟಿ ಡಕ್ಟ್ ಅಭಿವೃದ್ಧಿ ಕಾಮಗಾರಿಯನ್ನು 1.50 ಕೋಟಿ ರೂ. ಮೊತ್ತದಲ್ಲಿ ಕೈಗೆತ್ತಿಕೊಳ್ಳಲಾಗಿದೆ ಎಂದರು.

ವಾರ್ಡ್ ನಂ.20, 28 ಹಾಗೂ 30 ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ಒಟ್ಟು ಅಂದಾಜು ಮೊತ್ತ 19 ಕೋಟಿಯಾಗಿದ್ದು, ನಗರದಲ್ಲಿ ಮಳೆನೀರು ನಿರ್ವಹಣೆ, ಒಳಚರಂಡಿ ಹಾಗೂ ರಸ್ತೆ ಮೂಲಸೌಕರ್ಯ ಸುಧಾರಿಸಲು ಈ ಕಾಮಗಾರಿಗಳು ಪೂರಕವಾಗಲಿವೆ ಎಂದರು.

ವಾರ್ಡ್ ನಂ. 28ರ ಅಬ್ದುಲ್ ಹಮೀದ್ ದರ್ಗಾ ಕ್ರಾಸ್ ನಿಂದ ಕೆಕೆಜಿಎಸ್ ವೃತ್ತ ಹಾಗೂ ಸಂದಲ್ ಬಾವಡಿ ಪ್ರದೇಶಗಳಲ್ಲಿ ಒಳಚರಂಡಿ, ರಸ್ತೆ ಮತ್ತು ಮಳೆನೀರು ಚರಂಡಿಯನ್ನು 2 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು ಎಂದರು.

ಖಾಜಾ ನಗರ ಮತ್ತು ನವಭಾಗ ಪ್ರದೇಶಗಳಲ್ಲಿ ಒಳಚರಂಡಿ, ಚರಂಡಿ ಹಾಗೂ ರಸ್ತೆ ಅಭಿವೃದ್ಧಿಗೆ 2 ಕೋಟಿ ರೂ, ಟಿಪ್ಪು ಸುಲ್ತಾನ್ ನಗರ ಕೋಟೆ ಗೋಡೆಯಿಂದ ಅಲಿಕ್ ರೋಜಾ ಮಾರ್ಗವಾಗಿ ಸರಕಾರಿ ತೋಟದವರೆಗೆ 2.50 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿಪಡಿಸಲಾಗುವುದು ಎಂದರು.

ಕಾಸ್‌ಗೇರಿ ಓಣಿ ಗಜಾನನ ಕಿರಾಣಿ ಅಂಗಡಿಯಿಂದ ಶಿರೂರಕರ ಹಾಗೂ ಜೇರಲಿ ಮನೆವರೆಗೆ 2 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದರು.

ವಾರ್ಡ್ ನಂ. 30ರ ಹಳ್ಳಿ ಕಾಲೋನಿ, ಹವೇಲಿ ಗಲ್ಲಿ ಹಾಗೂ ಟಿಪ್ಪು ನಗರ ಮತ್ತು ಲಾಲ್ ಬಂಗ್ಲಾ ಪ್ರದೇಶಗಳಲ್ಲಿ 3 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಮತ್ತು ಒಳಚರಂಡಿ ಅಭಿವೃದ್ಧಿಪಡಿಸಲಾಗುವುದು ಎಂದರು.

ನಗರದ ಮುಬಾರಕ್ ವೃತ್ತದಿಂದ ಆರ್ಕಾಟ್ ದರ್ಗಾ ರಸ್ತೆ ಅಂಕಲ್ ಕಾರ್ನರ್ ವರೆಗೆ ಮಳೆನೀರು ಚರಂಡಿ, ಯುಟಿಲಿಟಿ ಡಕ್ ಹಾಗೂ ರಸ್ತೆಯನ್ನು 2 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು. ವಾರ್ಡ್ ನಂ. 20ರ ಟಿಪ್ಪು ಸುಲ್ತಾನ್ ಕಾಲೋನಿ, ಮಕ್ಬೂಲ್ ನಗರ, ಇಂದಿರಾ ನಗರ, ಲತೀಫ್ ನಗರ, ಕೆಎಚ್‌ಬಿ ಕಾಲೋನಿ ಹಾಗೂ ಆದಿಲ ಶಾಹಿ ಪ್ರದೇಶಗಳಲ್ಲಿ ರಸ್ತೆ ಹಾಗೂ ಒಳಚರಂಡಿ ಪೈಪ್ ಲೈನ್ ಕಾಮಗಾರಿಗೆ 2 ಕೋಟಿ ರೂ. ವೆಚ್ಚ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಗಂಗಾಧರ ಸಂಬಣ್ಣಿ, ವಿಜಯಪುರ ಮಹಾನಗರ ಪಾಲಿಕೆ ಆಯುಕ್ತರಾದ ವಿಜಯಕುಮಾರ್ ಮೆಕ್ಕಳಕಿ, ಅಧೀಕ್ಷಕ ಅಭಿಯಂತರರಾದ ಇ. ತಿಮ್ಮಪ್ಪ, ಜಮೀರ್ ಬಾಂಗಿ, ಮುಬೀನ್ ಶೇಖ್, ಕೈಸರ್ ಇನಾಮದಾರ್ ಹಾಗೂ ಅಪ್ಪು ಪೂಜಾರಿ ಸೇರಿದಂತೆ ಸಂಬಂಧಿಸಿದ ವಾರ್ಡ್ಗಳ ಪಾಲಿಕೆ ಸದಸ್ಯರು ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR